ಸಂಪಾದಕರು: ರವಿಕುಮಾರ್ ಸಿ.ಹೆಚ್.
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily
ಪ್ರತಿ ಸುದ್ದಿಯ ಧ್ವನಿ

suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 Issue:87 Date:18-04-2026 Saturday RNI NO : KARKAN/2021/80805 L2/RNP-1285/TMR/2025-27 Page :4 Price: 1.00
ಸಂಪುಟ: 05 ಸಂಚಿಕೆ: 87 ಪುಟ : 4 ಬೆಲೆ: 1.00 ರೂ

## ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಸೇರಿ 16 ಮಂದಿಗೆ ಜೀವಾವಧಿ ಶಿಕ್ಷೆ

ಬೆಂಗಳೂರು: ಧಾರವಾಡ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅವರಿಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಜೀವಾವಧಿ ಶಿಕ್ಷೆಯನ್ನು ಪ್ರಕಟಿಸಿದೆ. ಜನಪ್ರತಿನಿಧಿ ನ್ಯಾಯಾಲಯದ ನ್ಯಾಯಾಧೀಶರಾದ ಸಂತೋಷ್ ಗಜಾನನ್ ಭಟ್ ಅವರು ತೀರ್ಪು ಓದಿದರು. ವಿನಯ್ ಸೇರಿದಂತೆ 16 ಆರೋಪಿಗಳಿಗೆ ಜೀವಾವಧಿ ಶಿಕ್ಷೆಯಾಗಿದೆ.ವಿನಯ ಕುಲಕರ್ಣಿ ದೋಷಿ ಎಂದು ಬುಧವಾರವೇ ಕೋರ್ಟ್ ಘೋಷಿಸಿತ್ತು. ಗುರುವಾರ ಆರೋಪಿಗಳ ಹೇಳಿಕೆ ದಾಖಲಿಸಿದ ನ್ಯಾಯಾಲಯ, ತೀರ್ಪನ್ನು ಶುಕ್ರವಾರಕ್ಕೆ ಮುಂದೂಡಿತ್ತು. ಇದೀಗ ತೀರ್ಪು ಬಂದಿದೆ. ಇದರೊಂದಿಗೆ, ವಿನಯ್ ಕುಲಕರ್ಣಿ ಅವರ ಶಾಸಕ ಸ್ಥಾನವೂ ಇಲ್ಲದಾಗಲಿದೆ. ಈ ತೀರ್ಪಿನ ಕುರಿತು ವಿನಯ್ ಅವರು ಮೇಲಿನ ಕೋರ್ಟ್‌ಗೆ ಅಪೀಲು ಸಲ್ಲಿಸಲು ಅವಕಾಶವಿದೆ.

### ಹತ್ತು ವರ್ಷಗಳಿಂದ ವಿಚಾರಣೆ

ಕಳೆದ 10 ವರ್ಷಗಳಿಂದ ಪ್ರಕರಣದ ತನಿಖೆ ನಡೆಯುತ್ತಿದ್ದು, ವಿನಯ್ ಕುಲಕರ್ಣಿ ಸೇರಿ 17 ಮಂದಿ ಅಪರಾಧಿಗಳು ಎಂದು ಜನಪ್ರತಿನಿಧಿ ನ್ಯಾಯಾಲಯದ ನ್ಯಾಯಾಧೀಶರಾದ ಸಂತೋಷ್ ಗಜಾನನ್ ಭಟ್ ಅವರು ಬುಧವಾರ ತೀರ್ಪು ಪ್ರಕಟಿಸಿದ್ದರು. ಕೂಡಲೇ ಅವರನ್ನು ಸಿಬಿಐ ಪೊಲೀಸರು ವಶಕ್ಕೆ ಪಡೆದುಕೊಂಡಿದ್ದು, ಅವರನ್ನು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿಗೆ ಕರೆದೊಯ್ಯಲಾಗಿತ್ತು. ಪ್ರಕರಣವನ್ನು ಸಿಬಿಐ



ತನಿಖೆ ನಡೆಸಿದ್ದು, ಆರೋಪಿಗಳ ವಿರುದ್ಧ ಐಪಿಸಿ ಸೆಕ್ಷನ್120(ಬಿ) ಜೊತೆಗೆ 302, 217, 201, 143, 147, 148 ಜೊತೆಗೆ 149, ಶಸ್ತ್ರಾಸ್ತ್ರ ಕಾಯಿದೆ ಸೆಕ್ಷನ್ 25 ಜೊತೆಗೆ 3, 5, 8, 29 ಮತ್ತು ಭ್ರಷ್ಟಾಚಾರ ಪ್ರತಿಬಂಧಕ ಕಾಯಿದೆ ಸೆಕ್ಷನ್ 13(2) ಜೊತೆಗೆ 13(1)(ಡಿ) ಅಡಿ ಆರೋಪ ಪಟ್ಟಿ ಸಲ್ಲಿಸಿತ್ತು. ವಿನಯ್ ಕುಲಕರ್ಣಿ, ಇಬ್ಬರು ಪೊಲೀಸರು ಸೇರಿದಂತೆ ಒಟ್ಟು 21 ಆರೋಪಿಗಳನ್ನು ಆರೋಪ ಪಟ್ಟಿಯಲ್ಲಿ ಹೆಸರಿಸಲಾಗಿತ್ತು. ಆ ಪೈಕಿ 17 ಮಂದಿ ಮೇಲೆ ಅಪರಾಧ ಸಾಭೀತಾಗಿದೆ. 2016ರ ಜೂನ್‌ನಲ್ಲಿ ನಡೆದಿದ್ದ ಕೊಲೆ ಪ್ರಕರಣ ಇದಾಗಿದ್ದು 10 ವರ್ಷಗಳ ಸುದೀರ್ಘ ವಿಚಾರಣೆ ಬಳಿಕ ತೀರ್ಪು ಪ್ರಕಟವಾಗಿದೆ.

### ಕೊಲೆ ಪ್ರಕರಣದ ಹಿನ್ನೆಲೆ

2016 ಜೂನ್ 15 ರಂದು ಧಾರವಾಡದ ಸಪ್ತಾಪುರದಲ್ಲಿರುವ ಯೋಗೇಶ್ ಗೌಡ ಅವರದ್ದೇ ಒಡೆತನದ ಉದಯ್ ಜಿಮ್‌ನಲ್ಲಿ ಬೆಳಗಿನ ಜಾವ ಅವರು ದಿನಪತ್ರಿಕೆ ಓದುತ್ತಿದ್ದಾಗ, ಅಲ್ಲಿಗೆ ಬಂದ ದುಷ್ಕರ್ಮಿಗಳ ಗುಂಪೊಂದು ಅವರ ಕಣ್ಣಿಗೆ ಖಾರದ ಪುಡಿ ಎರಚಿ, ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿ ಪರಾರಿಯಾಗಿತ್ತು.
ಆರಂಭದಲ್ಲಿ ಸ್ಥಳೀಯ ಪೊಲೀಸರು ಈ ಪ್ರಕರಣವನ್ನು ರಿಯಲ್ ಎಸ್ಟೇಟ್ (ಆಸ್ತಿ) ವಿವಾದ ಮತ್ತು ವೈಯಕ್ತಿಕ ದ್ವೇಷದ ಹಿನ್ನೆಲೆಯಲ್ಲಿ ನಡೆದ ಕೊಲೆ ಎಂದು ತನಿಖೆ ನಡೆಸಿ, ಬಸವರಾಜ ಮುತ್ತಗಿ ಸೇರಿದಂತೆ ಆರು ಜನರನ್ನು ಬಂಧಿಸಿದ್ದರು. ಆದರೆ, ಯೋಗೇಶ್ ಗೌಡ ಅವರ ಸಹೋದರ ಗುರುನಾಥ ಗೌಡ ಮತ್ತು ಇತರ ಕುಟುಂಬಸ್ಥರು ಇದೊಂದು ರಾಜಕೀಯ ಪ್ರೇರಿತ ಹತ್ಯೆ ಎಂದು ಆರೋಪಿಸಿದರು.
ಈ ಹತ್ಯೆಯ ಹಿಂದೆ ಅಂದಿನ ಕಾಂಗ್ರೆಸ್ ಸರ್ಕಾರದಲ್ಲಿ ಗಣಿ ಮತ್ತು ಭೂವಿಜ್ಞಾನ ಸಚಿವರಾಗಿದ್ದ ಹಾಗೂ ಧಾರವಾಡದ ಪ್ರಭಾವಿ ನಾಯಕ ವಿನಯ್ ಕುಲಕರ್ಣಿ ಅವರ ಕೈವಾಡವಿದೆ ಎಂದು ಯೋಗೇಶ್ ಗೌಡ ಕುಟುಂಬಸ್ಥರು ಮತ್ತು ಬಿಜೆಪಿ ನಾಯಕರು ಗಂಭೀರ ಆರೋಪ ಮಾಡಿದರು. ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಯೋಗೇಶ್ ಗೌಡ ಅವರು ವಿನಯ್ ಕುಲಕರ್ಣಿ ಬೆಂಬಲಿತ ಅಭ್ಯರ್ಥಿಯನ್ನು ಸೋಲಿಸಿದ್ದರು, ಇದೇ ರಾಜಕೀಯ ದ್ವೇಷವೇ ಹತ್ಯೆಗೆ ಕಾರಣ ಎಂದು ಆರೋಪಿಸಲಾಯಿತು.
ಪ್ರಮುಖ ಆರೋಪಿಗಳು: ಸಂತೋಷ್, ಅಶ್ವತ್ಥ, ಸುನೀಲ್ ನಜ್ಮೀರ್ ಅಹ್ಮದ್, ಹರ್ಷಿತ್, ವಿನಯ್ ಕುಲಕರ್ಣಿ , ಶಿವಾನಂದ್, ಚನ್ನಕೇಶವ, ಬಸವರಾಜ್ ಮುತ್ತಗಿ , ಕೀರ್ತಿ ಕುಮಾರ್, ವಿನಾಯಕ್, ದಿನೇಶ್, ಶಹನವಾಜ್, ನೂತನ್, ಹರ್ಷಿತ್, ಚಂದ್ರಶೇಖರ ಇಂಡಿ, ಶಿವಾನಂದ್, ವಿಕಾಸ್, ವಾಸುದೇವ, ವಿಕ್ರಂ.

### ಸಿಬಿಐ ತನಿಖೆಗೆ ಹಸ್ತಾಂತರ

2019ರಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ, ಯೋಗೇಶ್ ಗೌಡ ಕುಟುಂಬದ ಒತ್ತಾಯದ ಮೇರೆಗೆ 2019ರ ಸೆಪ್ಟೆಂಬರ್‌ನಲ್ಲಿ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಾಯಿತು. ಸಿಬಿಐ ಅಧಿಕಾರಿಗಳು ತನಿಖೆ ಕೈಗೆತ್ತಿಕೊಂಡ ನಂತರ ಪ್ರಕರಣಕ್ಕೆ ದೊಡ್ಡ ತಿರುವು ಸಿಕ್ಕಿತು. ಸಾಕ್ಷ್ಯ ನಾಶ, ಬೆದರಿಕೆ ಮತ್ತು ಹತ್ಯೆಯ ಸಂಚು ರೂಪಿಸಿದ ಆರೋಪದ ಮೇಲೆ ನವೆಂಬರ್ 5, 2020 ರಂದು ಮಾಜಿ ಸಚಿವ ವಿನಯ್ ಕುಲಕರ್ಣಿ ಅವರನ್ನು ಸಿಬಿಐ ಬಂಧಿಸಿತು. ವಿನಯ್ ಕುಲಕರ್ಣಿ ಅವರ ಸಂಬಂಧಿ ಚಂದ್ರಶೇಖರ್ ಇಂಡಿ ಸೇರಿದಂತೆ ಇತರ ಕೆಲವರನ್ನೂ ಬಂಧಿಸಲಾಯಿತು. ಸಿಬಿಐ ಸಲ್ಲಿಸಿದ ಚಾರ್ಜ್‌ಶೀಟ್‌ನಲ್ಲಿ ವಿನಯ್ ಕುಲಕರ್ಣಿ ಅವರನ್ನು ಪ್ರಮುಖ ಆರೋಪಿ (01) ಎಂದು ಉಲ್ಲೇಖಿಸಲಾಯಿತು.

## ಡಿಜಿ–ಐಜಿಪಿ ಸಲೀಂ ಅವರ ಸೇವಾವಧಿ ವಿಸ್ತರಿಸಿ ಸರ್ಕಾರ ಆದೇಶ

ಬೆಂಗಳೂರು: ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಎಂ.ಎ.ಸಲೀಂ ಅವರ ಸೇವಾವಧಿಯನ್ನು ವಿಸ್ತರಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. 2025ರ ಮೇನಲ್ಲಿ ಪ್ರಭಾರ ರಾಜ್ಯ ಪೊಲೀಸ್ ಮಹಾನಿರ್ದೇಶಕರಾಗಿ ನೇಮಕವಾಗಿದ್ದ ಎಂ.ಎ.ಸಲೀಂ ಅವರ ಸೇವಾವಧಿಯನ್ನು 2027ರ ಆ.29ರವರೆಗೆ ವಿಸ್ತರಣೆ ಮಾಡಲಾಗಿದೆ.



1993ರ ಬ್ಯಾಚ್ ಐಪಿಎಸ್ ಅಧಿಕಾರಿಯಾಗಿರುವ ಎಂ.ಎ.ಸಲೀಂ ಅವರು ಈ ವರ್ಷದ ಜೂನ್‌ನಲ್ಲಿ ನಿವೃತ್ತಿಯಾಗಬೇಕಿತ್ತು. ಆದರೆ ಸುಪ್ರೀಂಕೋರ್ಟ್ ತೀರ್ಪಿನ ಅನುಸಾರ ಎಂ.ಎ.ಸಲೀಂ ಅವರ ಸೇವಾವಧಿಯನ್ನು ಇನ್ನೂ ಒಂದು ವರ್ಷ ವಿಸ್ತರಿಸಲಾಗಿದೆ.
ಸುಪ್ರೀಂಕೋರ್ಟ್ ಆದೇಶದಂತೆ ಡಿಜಿಪಿಗೆ ಕನಿಷ್ಠ 2 ವರ್ಷಗಳ ಅಧಿಕಾರಾವಧಿ ಇರಬೇಕು. 22.09.2006ರ ಸರ್ವೋಚ್ಚ ನ್ಯಾಯಾಲಯದ ಪ್ರಕಾಶ್ ಸಿಂಗ್ v ಯೂನಿಯನ್ ಆಫ್ ಇಂಡಿಯಾ ಪ್ರಕರಣದ ತೀರ್ಪಿನ ಅನುಸಾರ ಡಿಜಿ& ಐಜಿಪಿ ಎಂ.ಎ.ಸಲೀಂ ಅವರ ಅವಧಿ ಒಟ್ಟು 2 ವರ್ಷಕ್ಕೆ ವಿಸ್ತರಣೆ ಮಾಡಲಾಗಿದೆ.
ಡಾ.ಎಂಎ ಸಲೀಂ ಅವರು ಈ ಹಿಂದೆ ಕಲಬುರಗಿಯಲ್ಲಿ ಸಹಾಯಕ ಪೊಲೀಸ್ ವರಿಷ್ಠಾಧಿಕಾರಿಯಾಗಿ, ಕುಶಾಲನಗರ ಉಪ ವಿಭಾಗದಲ್ಲಿ ಸಹಾಯಕ ಪೊಲೀಸ್ ವರಿಷ್ಠಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದ್ದರು. ಪೊಲೀಸ್ ಮಹಾನಿರ್ದೇಶಕರಾಗಿ ಅಧಿಕಾರ ವಹಿಸಿಕೊಳ್ಳುವ ಮುನ್ನ ಡಾ. ಎಂ. ಎ ಸಲೀಂ ಅವರು ಸಿಐಡಿ ಡಿಜಿಪಿಯಾಗಿದ್ದರು. ಅಲ್ಲದೇ ಪ್ರಮುಖವಾಗಿ ಬೆಂಗಳೂರು ಸ್ಪೆಷಲ್ ಟ್ರಾಫಿಕ್ ಕಮಿಷನರ್ ಆಗಿ ಅನೇಕ ಸಂಚಾರ ಸುಧಾರಣೆ ಜಾರಿಗೆ ತಂದು ಜನಪ್ರಿಯರಾಗಿದ್ದರು.

## ಹುಳಿಯಾರಿನ ವಾರದ ತರಕಾರಿ ಸಂತೆ ಮೈದಾನ ಎಪಿಎಂಸಿ ಮಾರುಕಟ್ಟೆಗೆ ಸ್ಥಳಾಂತರ

ಹುಳಿಯಾರು : ಪಟ್ಟಣದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಪ್ರತಿ ಗುರುವಾರ ನಡೆಯುವ ತರಕಾರಿ ಸಂತೆಯನ್ನು ಏ. 23ರಿಂದ ಹುಳಿಯಾರಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎ.ಪಿ.ಎಂ.ಸಿ) ಆಡಳಿತ ಕಚೇರಿಯ ಹಿಂಭಾಗದ ಖಾಲಿ ಜಾಗಕ್ಕೆ ಸ್ಥಳಾಂತರಿಸಲಾಗುತ್ತಿದೆ ಎಂದು ಸಮಿತಿಯ ಕಾರ್ಯದರ್ಶಿ ಎಂ. ನಾಗೇಂದ್ರ ಕುಮಾರ್ ತಿಳಿಸಿದ್ದಾರೆ.
ಈ ಕುರಿತು ಗುರುವಾರ ಸಂತೆ ಮೈದಾನಕ್ಕೆ ಭೇಟಿ ನೀಡಿ ಪ್ರಚಾರ ನಡೆಸಿದ ಅವರು, ಸ್ಥಳಾಂತರದ ಕುರಿತು ಸಾರ್ವಜನಿಕರು ಹಾಗೂ ರೈತ ಬಾಂಧವರು ಸಹಕರಿಸಬೇಕೆಂದು ಮನವಿ ಮಾಡಿದರು.
ಪ್ರಥಮ ಹಂತದಲ್ಲಿ 32 ಜನ ತರಕಾರಿ ವ್ಯಾಪಾರಸ್ಥರನ್ನು ಗುರುತಿಸಲಾಗಿದ್ದು, ಅವರಿಗೆ ಎಪಿಎಂಸಿ ಆವರಣದಲ್ಲಿ ಬಾಕ್ಸ್ ಶೈಲಿಯಲ್ಲಿ ಜಾಗವನ್ನು ಗುರುತು ಮಾಡಿ ಅವಕಾಶ ಕಲ್ಪಿಸಲಾಗುವುದು. ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಪಾರಸ್ಥರು ಬಂದಲ್ಲಿ ಮುಂದಿನ ದಿನಗಳಲ್ಲಿ ಅವರಿಗೂ ವ್ಯವಸ್ಥೆ ಮಾಡಲಾಗುವುದು ಎಂದರು.
ಶುಲ್ಕದ ವಿವರ : ಸಂತೆ ವ್ಯಾಪಾರಸ್ಥರಿಗೆ ಪ್ರತಿ ತಿಂಗಳು




ನಿಗದಿತ ನೆಲ ಬಾಡಿಗೆ ಹಾಗೂ ಶೇಕಡಾ 0.60 ಪೈಸೆಯಂತೆ ಬಳಕೆದಾರರ ಶುಲ್ಕವನ್ನು ಕಡ್ಡಾಯವಾಗಿ ವಿಧಿಸಲಾಗುತ್ತದೆ ಎಂದರು.
ಕೃಷಿಯೇತರ ವ್ಯಾಪಾರಕ್ಕೆ ನಿಷೇಧ : ಸದ್ಯಕ್ಕೆ ಕೇವಲ ತರಕಾರಿ ಮಾರಾಟಕ್ಕೆ ಮಾತ್ರ ಅವಕಾಶ ನೀಡಲಾಗಿದ್ದು, ತರಕಾರಿ ಹೊರತುಪಡಿಸಿ ಇತರ ಯಾವುದೇ ಕೃಷಿಯೇತರ ವ್ಯಾಪಾರಸ್ಥರಿಗೆ ಪ್ರಾಂಗಣದ ಒಳಭಾಗದಲ್ಲಿ ವ್ಯಾಪಾರ ಮಾಡಲು ಕಡ್ಡಾಯವಾಗಿ ನಿಷೇಧ ಹೇರಲಾಗಿದೆ ಎಂದು ತಿಳಿಸಿದರು.
ಮೂಲಸೌಕರ್ಯ : ಮಾರುಕಟ್ಟೆಗೆ ಬರುವ ರೈತರು ಮತ್ತು ಸಾರ್ವಜನಿಕರಿಗಾಗಿ ಈಗಾಗಲೇ ಕುಡಿಯುವ ನೀರು ಹಾಗೂ ಶೌಚಾಲಯದ ವ್ಯವಸ್ಥೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಹಂತ – ಹಂತವಾಗಿ ಪ್ಲಾಟ್ ಫಾರ್ಮ್ ಸೇರಿದಂತೆ ಹೆಚ್ಚಿನ ಸೌಲಭ್ಯಗಳನ್ನು ಒದಗಿಸಲಾಗುವುದು.
ಈಗ ನಡೆಯುತ್ತಿದ್ದ ಸಂತೆಯನ್ನು ವ್ಯವಸ್ಥಿತವಾಗಿ ನಡೆಸುವ ಉದ್ದೇಶದಿಂದ ಎಪಿಎಂಸಿ ಆವರಣಕ್ಕೆ ಸ್ಥಳಾಂತರಿಸಲಾಗುತ್ತಿದೆ. ರೈತರು ತಾವು ತರುವ ತರಕಾರಿಗಳನ್ನು ಸಮಿತಿಯು ನಿಗದಿಪಡಿಸಿದ ಜಾಗದಲ್ಲಿ ಮಾತ್ರ ಇಟ್ಟುಕೊಂಡು ವ್ಯಾಪಾರ ಮಾಡಬೇಕು, ಎಂದು ನಾಗೇಂದ್ರಕುಮಾರ್ ಅವರು ಈ ಸಂದರ್ಭದಲ್ಲಿ ತಿಳಿಸಿದರು. ಬರುವ ಗುರುವಾರದಿಂದಲೇ (ಏಪ್ರಿಲ್ 23) ಈ ಹೊಸ ವ್ಯವಸ್ಥೆ ಜಾರಿಗೆ ಬರಲಿದೆ ಎಂದರು.

## ‘ಫಲಾನುಭವಿಗಳಿಂದ ಲಂಚ ಪಡೆದರೆ ಸಹಿಸುವುದಿಲ್ಲ’– ಸುರೇಶ್‌ಗೌಡ

ತುಮಕೂರು: ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ನಿಗಮಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಶಾಸಕ ಸುರೇಶ್‌ಗೌಡರು ಫಲಾನುಭವಿಗಳನ್ನು ಗುರುತಿಸಿ ಅವರಿಗೆ ಸೌಲಭ್ಯ ಒದಗಿಸುವಲ್ಲಿ ಅಧಿಕಾರಿಗಳು ನಿರ್ಲಕ್ಷ ವಹಿಸಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.
ಶುಕ್ರವಾರ ತುಮಕೂರು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶಾಸಕ ಸುರೇಶ್‌ಗೌಡರ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಠ ಪಂಗಡಗಳ ಅಭಿವೃದ್ಧಿ ನಿಗಮ, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಕರ್ನಾಟಕ ಅದಿ ಜಾಂಬವ ಅಭಿವೃದ್ಧಿ ನಿಗಮ, ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ತಾಂಡ ಅಭಿವೃದ್ಧಿ ನಿಗಮ ಮತ್ತಿತರ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು. 2023–24, 2024–25 ಮತ್ತು 2025–26ನೇ ಸಾಲಿನ ಯೋಜನೆಗಳು ಹಾಗೂ ಹಾಗೂ ಇನ್ನಿತರ ಸೌಲಭ್ಯಗಳ ಕುರಿತಂತೆ ಪ್ರಗತಿ ಪರಿಶೀಲನೆ ನಡೆಸಿದರು.




ಬಹುತೇಕ ನಿಗಮಗಳು ತಮ್ಮ ವಾರ್ಷಿಗ ಗುರಿ ಸಾಧಿಸಿಲ್ಲ. ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡಿ ಅವರಿಗೆ ಕೊಳವೆಬಾವಿ ಕೊರೆಯುವುದರಲ್ಲಿ ಆಸಕ್ತಿ ತೋರಿಸಿಲ್ಲ. ಈಗಾಗಲೇ ಕೊರೆದಿರುವ ಪ್ರಕರಣಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸದೆ ನಿರ್ಲಕ್ಷ ಮಾಡಿರುವುದನ್ನು ಗಮನಿಸಿದ ಶಾಸಕರು, ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಒದಗಿಸಿಲ್ಲ ಏಕೆ? ಎಂದು ಶಾಸಕ ಸುರೇಶ್‌ಗೌಡ ಖಾರವಾಗಿ ಪ್ರಶ್ನಿಸಿದರು. ಶಾಸಕರ ಪ್ರಶ್ನೆಗೆ ಸಮರ್ಪಕ ಉತ್ತರ ನೀಡುವಲ್ಲಿ ಅಧಿಕಾರಿಗಳು ವಿಫಲರಾದರು. ಸರ್ಕಾರದ ಕಾರ್ಯಕ್ರಮಗಳನ್ನು ಫಲಾನುಭವಿಗಳಿಗೆ ತಲುಪಿಸುವಲ್ಲಿ ತೀವ್ರ ನಿರ್ಲಕ್ಷ, ನಿರಾಸಕ್ತಿ ವಹಿಸಿದ್ದೀರಿ ಎಂದು ಅಧಿಕಾರಿಗಳನ್ನು ತರಾಟೆ ತೆಗೆದುಕೊಂಡರು.
ಸಾರಥಿ ಫಲಾನುಭವಿಗಳಿಗೆ ನೇರಸಾಲ, ಗಂಗಾಕಲ್ಯಾಣ ಯೋಜನೆ, ಸ್ವಾವಲಂಬಿ ಯೋಜನೆ, ಮುಂತಾದ ಯೋಜನೆಗಳ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು. ಫಲಾನುಭವಿಗಳಿಂದ, ರೈತರಿಂದ ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ಸೌಲಭ್ಯಗಳನ್ನು ತಲುಪಿಸಬೇಕು. ಲಂಚ ಪಡೆದು ಸವಲತ್ತು ನೀಡಿದರೆ ಸಹಿಸುವುದಿಲ್ಲ ಎಂದು ಶಾಸಕರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.
ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮೀನಾರಾಯಣಸ್ವಾಮಿ, ಸಹಾಯಕ ನಿರ್ದೇಶಕ ಮಂಜುನಾಥ್, ತಾಲ್ಲೂಕು ಪಂಚಾಯ್ತಿ ಯೋಜನಾಧಿಕಾರಿ ಲೋಕೇಶ್, ದೇವರಾಜು ಅರಸು ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಪಕರಾದ ವೆಂಕಟರಾಜು ಸೇರಿದಂತೆ ವಿವಿಧ ನಿಗಮಗಳ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ತರಬೇತಿ ಶಿಬಿರದ ಸಮಾರೋಪ ಸಮಾರಂಭ

ಚಿಕ್ಕನಾಯಕನಹಳ್ಳಿ : ರಾಜ್ಯದ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಜ್ಞಾನಕಲ್ಪ ಉಚಿತ ಸಿಇಟಿ / ನೀಟ್ / ಜೆಇಇ ತರಬೇತಿ ಶಿಬಿರದ ಸಮಾರೋಪ ಸಮಾರಂಭವನ್ನು ಏಪ್ರಿಲ್ 22 ರಂದು ಬೆಳಗ್ಗೆ 10.30 ಕ್ಕೆ ಹಮ್ಮಿಕೊಳ್ಳಲಾಗಿದೆ.
ಪಟ್ಟಣದ ತೀ.ನಂ.ಶ್ರೀ ಭವನದಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿದ್ದು ಕರ್ನಾಟಕ ಸರ್ಕಾರದ ಪ್ರಧಾನ ಕಾರ್ಯದರ್ಶಿ ಶ್ರೀರಂಗಯ್ಯ ಸಮಾರೋಪ ಸಮಾರಂಭ ಮಾಡಲಿದ್ದಾರೆ.ಶಾಸಕ ಸಿ.ಬಿ.ಸುರೇಶ್ ಬಾಬು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು ಸಿಇಟಿ ತರಬೇತಿ ಶಿಬಿರದ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಸಾ.ಚಿ.ನಾಗೇಶ್ ಆಶಯ ನುಡಿಗಳನ್ನಾಡುವರು.
ಸಿಇಟಿ ತರಬೇತಿ ಶಿಬಿರದ ಮೇಲುಸ್ತುವಾರಿ ಸಮಿತಿ ಕಾರ್ಯದರ್ಶಿ ಸಿ.ಟಿ.ಸುರೇಶ್ ಕುಮಾರ್ ವರದಿ ನೀಡಲಿದ್ದಾರೆ.ಮುಖ್ಯ ಅತಿಥಿಗಳಾಗಿ ತಹಶೀಲ್ದಾರ್ ಮಮತ, ತಾ.ಪಂ.ಕಾರ್ಯನಿರ್ವಹಣಾಧಿಕಾರಿ ಡಾ.ದೊಡ್ಡಸಿದ್ದಯ್ಯ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಸ್. ಕಾಂತರಾಜು, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಶ್ರೀಧರಮೂರ್ತಿ, ತಾಲ್ಲೂಕು ಜನತಾದಳದ ಅಧ್ಯಕ್ಷ ರಾಮಚಂದ್ರಯ್ಯ ಆಗಮಿಸಲಿದ್ದಾರೆ.
ಸಿಇಟಿ ತರಬೇತಿ ಶಿಬಿರದ ಮೇಲುಸ್ತವಾರಿ ಸಮಿತಿ ನಿಕಟ ಪೂರ್ವ ಅಧ್ಯಕ್ಷ ಲಕ್ಷ್ಮಣಪ್ಪ, ಸರ್ಕಾರಿ ಸ್ವ ಪ ಪೂ ಕಾಲೇಜು ಪ್ರಾಂಶುಪಾಲ ಸಿ.ಬಿ.ಪರಮೇಶ್ವರ್, ಹುಳಿಯಾರು ಕೆಂಕೆರೆ ಪ ಪೂ ಕಾಲೇಜು ಪ್ರಾಂಶುಪಾಲ ಎಂ.ಚನ್ನಬಸವಯ್ಯ, ಸಿಇಟಿ ತರಬೇತಿ ಶಿಬಿರದ ಸಂಪನ್ಮೂಲ ವ್ಯಕ್ತಿಗಳ ಸಂಯೋಜಕ ಕೃಷ್ಣ ಚೈತನ್ಯ ಗೌರವ ಉಪಸ್ಥಿತರಿರುವರು.

## ಮನೆ ಮುಂದೆ ಕಾರು, ಬೈಕ್‌ಗಳಿಗೆ ಬೆಂಕಿ ಹಚ್ಚಿದ ಪ್ರಕರಣ ಪರಾರಿಯಾಗಿದ ಆರೋಪಿ ವೈದ್ಯ ನಾಗಭೂಷಣ್ ಬಂಧನ





ಕೊರಟಗೆರೆ ;–ರಾತ್ರಿ ಮನೆಯ ಮುಂದೆ ನಿಲ್ಲಿಸಿದ್ದ ಕಾರು ಮತ್ತು ಎರಡು ಬೈಕ್‌ಗಳಿಗೆ ಬೆಂಕಿ ಹಚ್ಚಿ ಗ್ರಾಮದಲ್ಲಿ ಭಯದ ವಾತಾವರಣ ಸೃಷ್ಟಿಸಿದ್ದ ಪ್ರಕರಣವನ್ನು ಕೋಳಾಲ ಪೊಲೀಸರು ಬೇದಿಸುವಲ್ಲಿ ಯಶಸ್ವಿಯಾಗಿ ಎಂ.ಬಿ.ಬಿ.ಎಸ್ ವೈದ್ಯನೇ ಈ ದುಷ್ಕೃತ್ಯದಲ್ಲಿ ಭಾಗಿಯಾಗಿರೋದು ಬಯಲಾಗಿದೆ.
ಕೊರಟಗೆರೆ ತಾಲೂಕು ಕೋಳಾಲ ಗ್ರಾಮದಲ್ಲಿ ಕೆಸಿಎನ್ ಭಾರತ್ ಗ್ಯಾಸ್ ಏಜೆನ್ಸಿ ಮಾಲೀಕ ವಿರೂಪಾಕ್ಷ ಎನ್ನುವವರ ಮನೆ ಮುಂದೆ ನಿಲ್ಲಿಸಿದ್ದ ಕಾರು ಮತ್ತು ಎರಡು ಬೈಕುಗಳಿಗೆ ಕಳೆದ ಏ.11 ರಂದು ಶನಿವಾರ ತಡರಾತ್ರಿ ಬೆಂಕಿ ಹಚ್ಚಿ ಪರಾರಿಯಾಗಿದ್ದು ಕಾರು ಮತ್ತು ಬೈಕುಗಳು ಭಸ್ಮವಾಗಿದ್ದು ಗ್ರಾಮದಲ್ಲಿ ಭಯದ ವಾರಾವರಣ ಸೃಷ್ಟಿಯಾಗಿತ್ತು ಈ ಪ್ರಕರಣವನ್ನು ಕೋಳಾಲ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು ಪೊಲೀಸರ ಅಪರಾದಿಯ ಬಂದನಕ್ಕೆ ಬಲೆ ಬೀಸಿ ಬೆಂಕಿ ಇಟ್ಟು ಪರಾರಿಯಾಗಿದ್ದ ಕಿಡಿ ಗೇಡಿ ಎಂ.ಬಿ.ಬಿ.ಎಸ್ ವೈದ್ಯ ಹೆಚ್. ಆರ್.ನಾಗಭೂಷಣ್ ಎಂಬುವರನ್ನು ಬಂದಿಸುವಲ್ಲಿ ಕೋಳಾಲ ಪೊಲೀಸರು ಯಶಸ್ವಿಯಾಗಿ ಅರೋಪಿಯನ್ನು ಜೈಲಿಗಟ್ಟಿದ್ದಾರೆ.
ವಾಹನಗಳಿಗೆ ಬೆಂಕಿ ಹಚ್ಚಿ ಭಸ್ಮ ಮಾಡಲು ಹಳೇ ವೈಷಮ್ಯವೇ ಕಾರಣವಾಗಿ ಈ ಕೃತ್ಯ ಎಸಿಗಿದ್ದಾನೆ ಎನ್ನಲಾಗಿದೆ, ಕೋಳಾಲದ ಪಾರ್ವತಿ ಪರಮೇಶ್ವರ ಕಲ್ಯಾಣ ಮಂಟಪದ ಮಾಲೀಕನಾಗಿರುವ ವೈದ್ಯ ಡಾ.ನಾಗಭೂಷಣ್ ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡಿ ಕುಣಿಗಲ್‌ನಲ್ಲಿ ಕ್ಲಿನಿಕ್ ಇಟ್ಟುಕೊಂಡಿದ್ದಾನೆ ಎನ್ನಲಾಗಿದೆ, ತುಮಕೂರಿನಲ್ಲಿ ಪೆಟ್ರೋಲ್ ಖರೀದಿಸಿ ತಂದು ಗುರುತು ಕಾಣದಂತೆ ಮುಸುಕು ಹಾಕಿಕೊಂಡು ತಡ ರಾತ್ರಿ ಕಾರಿನ ಮೇಲೆ ಮತ್ತು ಬೈಕ್‌ಗಳ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಇಟ್ಟು ಪರಾರಿಯಾಗಿದ್ದ ಕೋಳಾಲ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಸಿಪಿಐ ಅನಿಲ್ ಮಾರ್ಗದರ್ಶನದಲ್ಲಿ ಪಿಎಸ್ಐ ಅಭಿಷೇಕ್ ನೇತೃತ್ವದ ತಂಡ ತನಿಖೆ ಕೈಗೊಂಡು ಸಿಸಿ ಕ್ಯಾಮೇರಾ ದೃಶ್ಯಗಳ ಆಧಾರಿಸಿ ವೈದ್ಯ ನಾಗಭೂಷಣ್ ನನ್ನ ಬಂದಿಸಿ ನ್ಯಾಯಾಧೀಶರ ಮುಂದೆ ಹಾಜರು ಪಡಿಸಿ ನ್ಯಾಯಾಂಗ ಬಂಧನಕ್ಕೆ ಒಳ ಪಡಿಸಿದ್ದಾರೆ.

## ಹುಚ್ಚು ಕರಡಿ ಆರ್ಭಟ: ಅರಣ್ಯ ಇಲಾಖೆ ವಾಹನದ ಟೈರ್ ಕಿತ್ತು ಎಸೆದು ದಾಳಿ. ಗಾಬರಿಗೊಂಡ ರೈತರು.

ಕೊರಟಗೆರೆ:ಪಟ್ಟಣದ ಸಮೀಪದ ಗೌಡನಕೆರೆ ಪಕ್ಕದ ರೈತರ ಜಮೀನುಗಳಲ್ಲಿ ಗುರುವಾರ ಬೆಳಗ್ಗೆ ಹುಚ್ಚು ಕರಡಿಯೊಂದು ಆರ್ಭಟ ನಡೆಸಿ ಭೀತಿ ಮೂಡಿಸಿದ ಘಟನೆ ನಡೆದಿದೆ.
ಬೆಳಗ್ಗೆ ಸುಮಾರು 6 ಗಂಟೆ ಸಮಯದಲ್ಲಿ ಎಂದಿನಂತೆ ಜಮೀನಿಗೆ ತೆರಳಿದ್ದ ರೈತರು ಕರಡಿಯ ಅಟ್ಟಹಾಸವನ್ನು ಕಂಡು ಗಾಬರಿಗೊಂಡು, ತಕ್ಷಣ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಧಾವಿಸಿದ ಅರಣ್ಯ ಇಲಾಖೆ ಸಿಬ್ಬಂದಿಗಳ ಮೇಲೆ ಕರಡಿ ಏಕಾಏಕಿ ದಾಳಿ ನಡೆಸಿದೆ.
ಕರಡಿ ದಾಳಿ ವೇಳೆ ಅರಣ್ಯ ಇಲಾಖೆಯ ವಾಹನದ ಮೇಲೆ ಹಾರಿದ ಕರಡಿ, ತನ್ನ ಚೂಪಾದ ಉಗುರುಗಳು ಹಾಗೂ ಬಾಯಿಂದ ವಾಹನದ ಟೈರ್‌ಗಳನ್ನು ಕಿತ್ತು ಹಾಕಲು ಪ್ರಯತ್ನಿಸಿದೆ. ಈ ಸಂದರ್ಭ ವಾಹನದಲ್ಲೇ ಕುಳಿತಿದ್ದ ಸಿಬ್ಬಂದಿಗಳು ಕೆಲಕಾಲ ಆತಂಕದಲ್ಲಿ ಕಳೆದರೂ, ಕರಡಿ ಸ್ಥಳ ಬದಲಾಯಿಸಿದ ಬಳಿಕ ಸುರಕ್ಷಿತವಾಗಿ ಹೊರಬಂದು ಪ್ರಾಣಾಪಾಯದಿಂದ ಪಾರಾಗಿದ್ದಾರೆ.
ನಂತರ ಕರಡಿಯನ್ನು ನಿಯಂತ್ರಿಸಲು ಅಧಿಕಾರಿಗಳು ಸಾಕಷ್ಟು ಪ್ರಯತ್ನ ನಡೆಸಿ, ಕೊನೆಗೂ ಸಮೀಪದ ಶೆಡ್ ಒಂದರಲ್ಲಿ ಕರಡಿಯನ್ನು ಕೂಡಿಹಾಕುವಲ್ಲಿ ಯಶಸ್ವಿಯಾದರು. ಬಳಿಕ ಅರವಳಿಕೆ ತಜ್ಞರು ಬಂದೂಕಿನಿಂದ ಚುಚ್ಚುಮದ್ದು ನೀಡಿ



ಶಾಂತಗೊಳಿಸಲು ಮುಂದಾದರು.
ಆದರೆ, ಚುಚ್ಚುಮದ್ದು ನೀಡಿದ ನಂತರ ಸುಮಾರು ಹತ್ತು ನಿಮಿಷಗಳಲ್ಲಿ ಪರಿಶೀಲಿಸಿದಾಗ, ಕರಡಿ ಅದಕ್ಕೂ ಮುನ್ನವೇ ಮೃತಪಟ್ಟಿರುವುದು ತಿಳಿದುಬಂದಿದೆ. ಸುಮಾರು ಒಂದು ಗಂಟೆ ಹಿಂದೆಯೇ ಕರಡಿಗೆ ಹುಚ್ಚು ಲಕ್ಷಣಗಳು ಕಾಣಿಸಿಕೊಂಡಿದ್ದು, ಅದೇ ಕಾರಣದಿಂದ ಸಾವನ್ನಪ್ಪಿರುವ ಸಾಧ್ಯತೆ ಇದೆ ಎಂದು ಅರವಳಿಕೆ ತಜ್ಞರು ಹಾಗೂ ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.
ಘಟನೆಯ ನಂತರ ಸ್ಥಳೀಯ ಪಶುವೈದ್ಯಾಧಿಕಾರಿಗಳು ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು ಅರವಳಿಕೆ ತಜ್ಞರ ಸಮ್ಮುಖದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದರು. ಮರಣ ಪರೀಕ್ಷೆಯ ವರದಿ ಬಂದ ಬಳಿಕ ಹೆಚ್ಚಿನ ಮಾಹಿತಿ ನೀಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.
ಘಟನೆ ಸ್ಥಳಕ್ಕೆ ತಹಶೀಲ್ದಾರ್ ಮಂಜುನಾಥ್ ಸೇರಿದಂತೆ ಅರಣ್ಯ ಇಲಾಖೆಯ ಡಿಎಫ್‌ಒ ಶಶಿಧರ್, ಎಸಿಎಫ್ ಮಲ್ಲಿಕಾರ್ಜುನ್, ಮಧುಗಿರಿ ಆರ್ ಎಫ್ ಓ ಸುರೇಶ್, ಕೊರಟಗೆರೆ ಆರ್‌ಎಫ್‌ಒ ಹನುಮಂತರಾಜು, ಉಪವಲಯ ಅರಣ್ಯ ಅಧಿಕಾರಿ ದಿಲೀಪ್ ಕುಮಾರ್, ಅರಣ್ಯಪಾಲಕ ಮಂಜುನಾಥ್ , ರಾಜಣ್ಣ ನರಸರಾಜು ಗಂಗರಾಜು, ನರಸಿಂಹಮೂರ್ತಿ,ಸೇರಿದಂತೆ ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ನಾಪತ್ತೆಯಾಗಿದ್ದ ಮಹಿಳೆಯ ತಲೆಬುರುಡೆ ಪತ್ತೆ, ಸಿಸಿಟಿವಿಯಲ್ಲಿ ಸಿಕ್ಕಿತು ಕೊಲೆ ಸುಳಿವು

ದಾಬಸ್ ಪೇಟೆ: ನಾಪತ್ತೆಯಾಗಿದ್ದ ಮಹಿಳೆಯೊಬ್ಬರ ತಲೆಬುರುಡೆ ಸೇರಿದಂತೆ ದೇಹಭಾಗಗಳು ಪತ್ತೆಯಾಗಿರುವ ಘಟನೆ ದಾಬಸ್‌ಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ತುಮಕೂರು ಜಿಲ್ಲೆಯ ಕ್ಯಾತ್ಸಂದ್ರದ ಬಸವೇಶ್ವರ ಬಡಾವಣೆಯಲ್ಲಿ ವಾಸವಿದ್ದ ಯಮುನಾ (38) ಮೃತಪಟ್ಟ ಮಹಿಳೆ. ಇವರ ತಲೆಬುರುಡೆ, ಬ್ಯಾಗ್, ಬಟ್ಟೆಯು ಸೋಂಪುರ ಹೋಬಳಿಯ ಹಳೆನಿಜಗಲ್ ಗ್ರಾಮದ ರಾಷ್ಟ್ರೀಯ ಹೆದ್ದಾರಿ– 48ರ ರಸ್ತೆ ಪಕ್ಕದ ಜಮೀನಿನಲ್ಲಿ ಪತ್ತೆಯಾಗಿದೆ.



ಹಳೆನಿಜಗಲ್ ಬಳಿಯಿರುವ ರಿಲಯನ್ಸ್ ಕಂಪನಿಯಲ್ಲಿ ಕಳೆದ ಆರೇಳು ತಿಂಗಳುಗಳಿಂದ ಇವರು ಕೆಲಸ ಮಾಡುತ್ತಿದ್ದರು. ಮಹಿಳೆ ಮಲ್ಲಿಕಾರ್ಜುನ್ ಎಂಬವರ ಜೊತೆ 19 ವರ್ಷದ ಹಿಂದೆ ವಿವಾಹವಾಗಿದ್ದರು. ಈಕೆಗೆ ಒಬ್ಬ ಗಂಡು ಹಾಗೂ ಒಬ್ಬ ಹೆಣ್ಣು ಮಗಳಿದ್ದಾಳೆ. ಮೃತ ಯಮುನಾ ಕಳೆದ ಮಾ.21ರಂದು ಕೆಲಸಕ್ಕೆ ಬಂದಿದ್ದು, ನಂತರ ಮನೆಗೆ ವಾಪಸು ಹೋಗದೆ ನಾಪತ್ತೆಯಾಗಿದ್ದರು. ಈ ಬಗ್ಗೆ ಮೃತಳ ಪತಿ ಮಲ್ಲಿಕಾರ್ಜುನ್ ಕ್ಯಾತ್ಸಂದ್ರ ಪೊಲೀಸ್ ಠಾಣೆಯಲ್ಲಿ ನಾಪತ್ತೆ ದೂರು ದಾಖಲಿಸಿದ್ದರು.

ನಂದಿಹಳ್ಳಿ ಗ್ರಾಮದ ಉಮೇಶ್ ಎಂಬವರು ತಮ್ಮ ಜಮೀನಿನಲ್ಲಿ ದೇವರ ಕಲ್ಲುಗಳಿದ್ದು, ಅದನ್ನು ಪೂಜಿಸಲು ಬಂದಾಗ ತಲೆಬುರುಡೆ ಬಿದ್ದಿರುವುದನ್ನು ಕಂಡಿದ್ದು, ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಘಟನಾ ಸ್ಥಳಕ್ಕೆ ದಾಬಸ್ ಪೇಟೆ ಹಾಗೂ ಕ್ಯಾತ್ಸಂದ್ರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದಾಗ ಘಟನಾ ಸ್ಥಳದಲ್ಲಿ ತಲೆಬುರುಡೆ, ಕಾಲಿನ ಮೂಳೆಗಳು, ಬ್ಯಾಗ್, ವಾಟರ್ ಬಾಟಲ್, ಕಂಪನಿ ಐಡಿ ಕಾರ್ಡ್, ಆಧಾರ್ ಕಾರ್ಡ್ ಪತ್ತೆಯಾಗಿದ್ದು, ಪರಿಶೀಲನೆ ನಡೆಸಿದಾಗ ಮಹಿಳೆಯ ಗುರುತು ಪತ್ತೆಯಾಗಿದೆ.

**ಅನೈತಿಕ ಸಂಬಂಧದ ಶಂಕೆ**

ಮೃತಳಿಗೆ ಗಂಡನ ತವರೂರಾದ ದೊಡ್ಡಬಳ್ಳಾಪುರ ತಾಲೂಕಿನ ಕೊಡಿಗೇಹಳ್ಳಿ ಗ್ರಾಮದಲ್ಲಿ ರಾಘವೇಂದ್ರ ಎಂಬಾತನ ಜೊತೆ ಅನೈತಿಕ ಸಂಬಂಧವಿತ್ತು. ಆತನ ಜೊತೆ ಆರೇಳು ವರ್ಷ ಸಂಸಾರ ನಡೆಸಿ ನಂತರ ಗಂಡನ ಮನೆಗೆ ವಾಪಾಸ್ಸು ಬಂದಿದ್ದರು. ಆದಾದ ಮೇಲೂ ರಾಘವೇಂದ್ರ ಈಕೆಗೆ ಮತ್ತೆ ನನ್ನ ಜೊತೆ ಬಂದು ಸಂಸಾರ ನಡೆಸುವಂತೆ ಕಿರುಕುಳ ಕೊಡುವುದಲ್ಲದೆ ನನ್ನ ಜೊತೆ ಬಾರದಿದ್ದರೆ ನಿನ್ನ ಗಂಡ, ಮಕ್ಕಳು ಸೇರಿದಂತೆ ನಿನ್ನನ್ನು ಸಾಯಿಸುತ್ತೇನೆಂದು ಜೀವ ಬೆದರಿಕೆ ಕೂಡ ಹಾಕಿರುವ ಬಗ್ಗೆ ಕುಟುಂಬಸ್ಥರು ಆರೋಪಿಸಿದ್ದಾರೆ.

ಮೃತ ಯಮುನಾ ತನ್ನ ಗಂಡ ಹಾಗೂ ಮಕ್ಕಳೊಂದಿಗೆ ಮಾ.19ರಂದು ಬರ್ತಡೇ ಆಚರಿಸಿಕೊಂಡಿದ್ದರು. ನಂತರ ಮಾ.21ರಂದು ಎಂದಿನಂತೆ ಕೆಲಸಕ್ಕೆ ಬಂದಿದ್ದಾರೆ. ಅಂದು ಸಂಜೆ ಕೆಲಸ ಬಿಟ್ಟಾಗ ಅನೈತಿಕ ಸಂಬಂಧ ಹೊಂದಿದ್ದ ರಾಘವೇಂದ್ರನ ಜೊತೆ ರಸ್ತೆಯಲ್ಲಿ ನಡೆದುಕೊಂಡು ಹೋಗಿರುವ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಪಕ್ಕದಲ್ಲೇ ಇರುವ ಜಮೀನಿಗೆ ಇಬ್ಬರೂ ಹೋಗಿದ್ದು ಅಲ್ಲಿ ಮೃತ ಯುಮುನಾ ಹಾಗೂ ರಾಘವೇಂದ್ರನ ನಡುವೆ ಜಗಳವಾಗಿದ್ದು, ಮಾತಿಗೆ ಮಾತು ಬೆಳೆದು ರಾಘವೇಂದ್ರ ಆಕೆಯನ್ನು ಕೊಲೆ ಮಾಡಿರಬಹುದು ಎಂಬ ಶಂಕೆಯನ್ನು ಪೊಲೀಸರು ವ್ಯಕ್ತಪಡಿಸಿದ್ದು, ನಾಪತ್ತೆಯಾಗಿರುವ ರಾಘವೇಂದ್ರನ ಹುಡುಕಾಟಕ್ಕೆ ಬಲೆ ಬೀಸಿದ್ದಾರೆ. ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ಉಪವರಿಷ್ಠಾಧಿಕಾರಿ ವೆಂಕಟೇಶ್ ಪ್ರಸನ್ನ, ಡಿವೈಎಸ್ ಪಿ ಜಗದೀಶ್, ಇನ್ಸ್ ಪೆಕ್ಟರ್‌ಗಳಾದ ಭರತ್ ಗೌಡ, ಗಿರೀಶ್, ನರೇಂದ್ರಬಾಬು, ಸಬ್ ಇನ್ಸ್ ಪೆಕ್ಟರ್ ಗಳಾದ ಸಿದ್ದಪ್ಪ, ದಿವ್ಯ, ವಿಧಿವಿಜ್ಞಾನ ತಂಡದ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ನಟ ಪುನೀತ್ ಪರಿಸರ ಹೋರಾಟಗಾರ್ತಿ ಸಾಲು ಮರದ ತಿಮ್ಮಕ್ಕ ಅವರಂತೆ ಸಮಾಜಮುಖಿ ಚಿಂತನೆ ಹೊಂದಿ ಬೆಳೆಯಬೇಕು

ಕೊರಟಗೆರೆ: ತಾಲೂಕಿನಲ್ಲಿ ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ಸ್ವಚ್ಛತೆ ಅತ್ಯಂತ ಅಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ಕೌಶಲ್ಯ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಮುರುಳೀಧರ ಹಾಲಪ್ಪ ಹೇಳಿದರು.

ತಾಲೂಕಿನ ಹೊಳವನಹಳ್ಳಿ ಸರ್ಕಾರಿ ಪಬ್ಲಿಕ್ ಶಾಲೆಯಲ್ಲಿ ಶುಕ್ರವಾರ ನಡೆದ ಜೀರ್ಣೋದ್ಧಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಾಲಾ ಪರಿಸರ ಸ್ವಚ್ಛವಾಗಿದ್ದರೆ ಮಕ್ಕಳಲ್ಲಿ ಕಲಿಕೆಯ ಆಸಕ್ತಿ ಹೆಚ್ಚುತ್ತದೆ,ಮಕ್ಕಳು ಕನ್ನಡ ಚಿತ್ರರಂಗದ ನಟ ಪುನೀತ್ ರಾಜಕುಮಾರ್ ಮತ್ತು ಪರಿಸರ ಹೋರಾಟಗಾರ್ತಿ ಸಾಲುಮರದ ತಿಮ್ಮಕ್ಕ ಅವರಂತೆ ಸಮಾಜಮುಖಿ ಚಿಂತನೆ ಹೊಂದಿ ಬೆಳೆಯಬೇಕು ಎಂದು ಕರೆ ನೀಡಿದರು.

ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರಗಳನ್ನು ಬೆಳೆಸುವುದು ಸಹ ಅಷ್ಟೇ ಮುಖ್ಯ ಎಂದು ಅಭಿಪ್ರಾಯಪಟ್ಟರು.



ಈ ಸಂದರ್ಭದಲ್ಲಿ ಸಿಸ್ಕೋ ಕಂಪನಿ ಗ್ರಾಮೀಣ ಶಾಲೆಗಳ ಅಭಿವೃದ್ಧಿಗೆ ಮುಂದಾಗಿರುವುದು ಶ್ಲಾಘನೀಯ ಕಾರ್ಯವಾಗಿದ್ದು, ಇಂತಹ ಸೇವಾ ಮನೋಭಾವದಿಂದ ಇನ್ನಷ್ಟು ಸಂಸ್ಥೆಗಳು ಮುಂದಾಗಬೇಕು ಎಂದು ಹೇಳಿದರು.

ಇದಾದ ಬಳಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದ್ದು, ಶಾಲಾ ಕಟ್ಟಡದ ಗೋಡೆಗಳಿಗೆ ಹೊಸ ಬಣ್ಣ ಹಚ್ಚುವ ಮೂಲಕ ಸ್ವಚ್ಛ ಹಾಗೂ ಆಕರ್ಷಕ ವಾತಾವರಣ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಯಿತು,ಸುಮಾರು 5 ಸಾವಿರ ಸ್ವಯಂಸೇವಕರ ತಂಡದೊಂದಿಗೆ ಸಿಸ್ಕೋ ಕಂಪನಿ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಕೈಜೋಡಿಸಿದೆ ಎಂದರು.

ಸ್ಥಳೀಯ ಹಳೆ ವಿದ್ಯಾರ್ಥಿ ಅಖಿಲೇಶ್ ಮಾತನಾಡಿ, ಶಾಲೆಯಲ್ಲಿ 400ಕ್ಕೂ ಹೆಚ್ಚು ಗ್ರಾಮೀಣ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಸಿಸ್ಕೋ ಕಂಪನಿಯ ಸಹಕಾರದಿಂದ ಗೋಡೆಗಳಿಗೆ ಪುನರ್‌ಬಣ್ಣ ಹಚ್ಚುವ ಕಾರ್ಯ ಕೈಗೊಳ್ಳಲಾಗಿದೆ, ತರಗತಿಗಳ ಸುಧಾರಣೆ, ಆಕರ್ಷಕ ಕಲಿಕಾ ವಾತಾವರಣ ನಿರ್ಮಾಣ, ವಿದ್ಯಾರ್ಥಿಗಳಿಗೆ ಪುಸ್ತಕ ಹಾಗೂ ಸ್ಟೇಷನರಿ ವಿತರಣೆ ಸೇರಿದಂತೆ ಗ್ರಾಮೀಣ ಶಿಕ್ಷಣ ಬಲವರ್ಧನೆಗೆ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಬನಶ್ರೀ ಫೌಂಡೇಶನ್ ಸಂಸ್ಥಾಪಕ ಗಿರೀಶ್ ಮಾತನಾಡಿ, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ದೇವಾಲಯಗಳ ಜೀರ್ಣೋದ್ಧಾರ ಹಾಗೂ ಸಂಸ್ಕೃತಿ ಉಳಿವಿಗೆ ಕೆಲಸ ಮಾಡಿರುವ ಸಂಸ್ಥೆ ಇದೀಗ ತುಮಕೂರು ಜಿಲ್ಲೆಯ ಸರ್ಕಾರಿ ಶಾಲೆಗಳ ಅಭಿವೃದ್ಧಿಗೂ ವಿಶೇಷ ಗಮನ ಹರಿಸಿದೆ ಎಂದರು. ಗ್ರಾಮೀಣ ಮಕ್ಕಳಿಗೆ ಇಂಗ್ಲಿಷ್ ಶಿಕ್ಷಣ ಒದಗಿಸುವುದು ಸೇರಿದಂತೆ ಹಲವು ಸಾಮಾಜಿಕ ಕಾರ್ಯಗಳಿಗೆ ಸಾರ್ವಜನಿಕರ ಸಹಕಾರವನ್ನು ಕೋರಿದರು.

ಕಾರ್ಯಕ್ರಮದಲ್ಲಿ ಸಿಸ್ಕೋ ಕಂಪನಿಯ ಸದಸ್ಯರು, ಎಸ್‌ಡಿಎಂಸಿ ಉಪಾಧ್ಯಕ್ಷ ಜಯರಾಜ್, ವ್ಯವಸ್ಥಾಪಕರು, ಮುಖ್ಯ ಶಿಕ್ಷಕ ರಾಜಣ್ಣ, ಶಿವಕುಮಾರ್, ಫೌಂಡೇಶನ್ ಸಿಬ್ಬಂದಿ, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಏ.18 ರಿಂದ 20ರವರೆಗೆ ಶ್ರೀ ಬಸವೇಶರಸ್ವಾಮಿ ಜಾತ್ರೆ

ತುಮಕೂರು: ತಾಲ್ಲೂಕಿನ ಬೆಳ್ಳಾವಿ ಹೋಬಳಿಯ ಬೊಮ್ಮೇಗೌಡನಪಾಳ್ಯ, ಗ್ರಾಮದ ಐತಿಹಾಸ ಪ್ರಸಿದ್ಧ ಶ್ರೀ ಬಸವೇಶ್ವರ ಸ್ವಾಮಿ ಜಾತ್ರಾ ಮಹೋತ್ಸವವು ಏ.18ರ ಶನಿವಾರದಿಂದ ಏ.20ರ ಸೋಮವಾರದವರೆಗೆ ನಡೆಯಲಿದೆ.





ಏ.18ರ ಶನಿವಾರ ಸಂಜೆ 6 ಗಂಟೆಗೆ ದೇವಾಲಯದ ಆವರಣದಲ್ಲಿ ಧ್ವಜಾರೋಹಣ ಮತ್ತು ಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ನಡೆಯಲಿದೆ.

ಏ.19 ಭಾನುವಾರ ಬೆಳಿಗ್ಗೆ 6.00 ಗಂಟೆಗೆ ಶ್ರೀ ವಿಶ್ವೇಶ್ವರ, ಶ್ರೀ ಬಸವೇಶ್ವರ ಸ್ವಾಮಿಯ ಮೂಲ ವಿಗ್ರಹಕ್ಕೆ ರುದ್ರಾಭಿಷೇಕ, ಜಲಾಭಿಷೇಕ, ಅಷ್ಟೋತ್ತರ, ಮಹಾಮಂಗಳಾರತಿ ಮತ್ತು ಅಲಂಕಾರ, ತೀರ್ಥಪ್ರಸಾದ ವಿನಿಯೋಗ, ಇದೇ ದಿನ ಸಂಜೆ 7.00 ಗಂಟೆಗೆ ದೇವಾಲಯಕ್ಕೆ ವಿಶೇಷ ಅಲಂಕಾರ ಹಾಗೂ ಮೂಲ ವಿಗ್ರಹಕ್ಕೆ ವಿಶೇಷ ಫಲ ಪುಷ್ಪಾಲಂಕಾರ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ಹಾಗೂ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ.

ಇದೇ ದಿನ ರಾತ್ರಿ 10.00 ಗಂಟೆಗೆ ನಂದಿ ಧ್ವಜ ಕುಣಿತ, ಅಂಗದ ವೀರರು ಮತ್ತು ಭದ್ರಕಾಳಿ ಹಾಗೂ ಅಘೋರಿ ಕುಣಿತದೊಂದಿಗೆ ಕರಡಿವಾದ್ಯ, ಆಕರ್ಷಕ ಸಿಡಿಮದ್ದುಗಳೊಂದಿಗೆ ಶ್ರೀ ಬಸವೇಶ್ವರಸ್ವಾಮಿ, ಶಿವ ಪಾರ್ವತಿ ದೇವರುಗಳನ್ನು ವಿಶೇಷ ಮುತ್ತಿನ ಪಲ್ಲಕ್ಕಿಯಲ್ಲಿ ಕೂರಿಸಿ ಗ್ರಾಮದ ರಾಜಬೀದಿಯಲ್ಲಿ ದೀಪಾಲಂಕಾರ ಹಾಗೂ ಬಾಣಬಿರುಸುಗಳೊಂದಿಗೆ ವೈಭವದ ಮೆರವಣಿಗೆ ನಡೆಸಲಾಗುವುದು.

ಏ.20ರ ಸೋಮವಾರ ಬಸವ ಜಯಂತಿ ಪ್ರಯುಕ್ತ ರುದ್ರಾಭಿಷೇಕ ಹಾಗೂ ಭಕ್ತಾದಿಗಳಿಗೆ ಸಂಜೆ 7.00 ಗಂಟೆಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಇದೇ ದಿನ ಸಂಜೆ ವಿಶೇಷವಾಗಿ ಗ್ರಾಮದ ರೈತಬಾಂಧವರು ಬಸವ ಜಯಂತಿಯ ಪ್ರಯುಕ್ತ ಸಂಜೆ 6.00 ಗಂಟೆಗೆ ಗೋವುಗಳನ್ನು ವಿಶೇಷ ಅಲಂಕಾರದೊಂದಿಗೆ ದೇವಾಲಯದ ಬಳಿಗೆ ಕರೆತಂದು ಗೋ ಮೆರವಣಿಗೆ ನಡೆಯಲಿದೆ ಎಂದು ದೇವಸ್ಥಾನದ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

# ನೀರಾವರಿ ಸೌಲಭ್ಯವಿರುವ ರೈತರು ರೇಷ್ಮೆ ಕೃಷಿ ಮಾಡಿ ಸರ್ಕಾರಿ ಸೌಲಭ್ಯ ಪಡೆಯಿರಿ

ಮಧುಗಿರಿ ....ಪ್ರತಿ ಒಂದು ಎಕರೆ ಹಿಪ್ಪು ನೇರಳೆ ತೋಟಕ್ಕೆ 300 ಮೊಟ್ಟೆ ಚಾಕಿ ಕಟ್ಟಿ 250 ಕೆಜಿ ರೇಷ್ಮೆ ಗೂಡು ಬೆಳೆಯಬಹುದು ಎಂದು ರೇಷ್ಮೆ ಇಲಾಖೆಯ ಸಹಾಯಕ ನಿರ್ದೇಶಕ ಶ್ರೀ. ಮೋಹನ್ ತಿಳಿಸಿದ್ದಾರೆ ತಾಲೂಕಿನ ಕೊಡಿಗೆನಳ್ಳಿ ಗ್ರಾಮದಲ್ಲಿ ರೇಷ್ಮೆ ಬೆಳೆಗಾರರಿಗೆ ಗುಂಪು ಸಭೆಯಲ್ಲಿ ಮಾತನಾಡಿದ ಅವರು ಹಿಪ್ಪು ನೇರಳೆ ಬೇಸಾಯದಲ್ಲಿ ಇಲಾಖೆಯಿಂದ ಶಿಫಾರಸ್ ಆಗಿರುವಂತಹ ಕೀಟನಾಶಕಗಳನ್ನು ಮಾತ್ರ ಬಳಸಬೇಕು ಎಂದು ತಿಳಿಸಿದರು. ರೇಷ್ಮೆ ಹುಳು ಸಾಕಾಣಿಕೆ ಮನೆ ನಿರ್ಮಾಣಕ್ಕೂ ಮುನ್ನ, ಸದರಿ ಖಾಲಿ ನಿವೇಶನವನ್ನು ದಿಶಾಂಕ್ ಆಪ್ ಮೂಲಕ ಖಚಿತಪಡಿಸಿಕೊಂಡ ನಂತರ ಹುಳು ಮನೆ ನಿರ್ಮಾಣ ತಕ್ಕದ್ದು ಎಂದು ಹೇಳಿದರು.

ರೇಷ್ಮೆ ಇಲಾಖೆಯ ರೇಷ್ಮೆ ವಿಸ್ತಾರಣಾಧಿಕಾರಿ ಶ್ರೀ. ವೀರಣ್ಣ ಮಾತನಾಡಿ ರೇಷ್ಮೆ ಇಲಾಖೆಯಿಂದ ರೇಷ್ಮೆ ಬೆಳೆಗಾರರಿಗೆ ಅಥವಾ ರೇಷ್ಮೆ ಕೃಷಿ ಕೈಗೊಂಡಿರುವ ರೈತರಿಗೆ ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು, ಒಂದು ಎಕರೆ ಹಿಪ್ಪು ನೇರಳೆ ನಾಟಿ ಮಾಡುವುದಕ್ಕೆ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ 40000 ಸಾವಿರದಿಂದ 50000 ಸಾವಿರದವರೆಗೆ ಸಹಾಯಧನವಿದೆ. ಹಿಪ್ಪು ನೇರಳೆ ತೋಟಕ್ಕೆ ಒಂದು ಎಕರೆ ವಿಸ್ತೀರ್ಣಕ್ಕೆ ಹನಿ ನೀರಾವರಿ ಅಳವಡಿಸಿಕೊಂಡರೆ 35 ರಿಂದ 40,000 ರೂ. ಸಹಾಯಧನ ಲಭ್ಯವಿದೆ ಎಂದರು. 1 ಸಾವಿರ ಚದುರ ಅಡಿ ರೇಷ್ಮೆ ಹುಳು ಸಾಕಾಣಿಕೆ ಮನೆಗೆ ಸಹಾಯಧನ 3,37, 500 ಸಾಮಾನ್ಯ ವರ್ಗದ ರೈತರಿಗೆ. ಎಸ್ ಸಿ & ಎಸ್ ಟಿ ವರ್ಗದವರಿಗೆ 405000 ಸಹಾಯಧನ ಲಭ್ಯವಿದೆ ಎಂದರು. ರೇಷ್ಮೆ ಹುಳು ಸಾಕಾಣಿಕೆ ಸಲಕರಣೆಗಳಾದ ಪ್ಲಾಸ್ಟಿಕ್ ಚಂದ್ರಿಕೆ ಹಾಗೂ ಪವರ್ ಸ್ಪೆಯರ್. ಇತರೆ ವರ್ಗದವರಿಗೆ ಶೇಕಡ 75 % ಸಬ್ಸಿಡಿ. ಎಸ್ಸಿ ಎಸ್ಟಿ ವರ್ಗದವರಿಗೆ ಶೇಕಡ 90% ಸಬ್ಸಿಡಿ ಸಿಗಲಿದೆ ಎಂದು ಮಾಹಿತಿ ನೀಡಿದರು.




ಸದರಿ ಕಾರ್ಯಕ್ರಮದಲ್ಲಿ ಪ್ರಗತಿಪರ ರೇಷ್ಮೆ ಬೆಳೆಗಾರ ಹಾಗೂ ಕೃಷಿಕ ಸಮಾಜದ ಉಪಾಧ್ಯಕ್ಷರಾದ ಶ್ರೀ ಪೆದ್ದ ದಾಸ್ ರೆಡ್ಡಿ ರವರು ಮಾತನಾಡಿ ನೀರಾವರಿ ಸೌಲಭ್ಯ ಕಡಿಮೆ ಇದ್ದರೂ ಸಹ, ರೇಷ್ಮೆ ಕೃಷಿ ಮಾಡಿ ಲಾಭಗಳಿಸಿರುವುದರ ಬಗ್ಗೆ ಮಾಹಿತಿ ನೀಡಿದರು ಹಾಗೂ ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ಹಾಗೂ ತಾಂತ್ರಿಕ ಮಾಹಿತಿಯನ್ನು ಪಡೆಯುವುದರ ಮೂಲಕ ರೈತರು ತಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಬಹುದು ಎಂದು ತಿಳಿಸಿದರು. ಸದರಿ ಕಾರ್ಯಕ್ರಮದಲ್ಲಿ ರೇಷ್ಮೆ ನಿರೀಕ್ಷಕರಾದ ಶ್ರೀ ರಮೇಶ್ ರವರು ಮಾತನಾಡಿ ನೀರಾವರಿ ಸೌಲಭ್ಯ ಇರುವ ರೈತರು ರೇಷ್ಮೆ ಕೃಷಿ ಮಾಡುವುದರ ಮೂಲಕ ಎಲ್ಲಾ ಸೌಲಭ್ಯವನ್ನು ಇಲಾಖೆಯಿಂದ ಪಡೆಯಬಹುದು ಎಂದು ತಿಳಿಸಿದರು.

# ಗುತ್ತಿಗೆ ಕಾರ್ಮಿಕರ ಹೋರಾಟಗಳನ್ನು ಹತ್ತಿಕ್ಕುವ ಸರ್ಕಾರದ ವಿರುದ್ದ ಸಿಐಟಿಯು ಹೋರಾಟ

ದೆಹಲಿಯ ಸುತ್ತಮುತ್ತ ರಾಜ್ಯಗಳಲ್ಲಿ ಗುತ್ತಿಗೆ ಕಾರ್ಮಿಕರ ಹೋರಾಟಗಳನ್ನು ಹತ್ತಿಕ್ಕುವ ಸರ್ಕಾರದ ವಿರುದ್ಧ ಸಿಐಟಿಯು ಹೋರಾಟ ಸಿಐಟಿಯು ಜಿಲ್ಲಾ ಕಾರ್ಯದರ್ಶಿ ಸುಜಿತ್ ನಾಯಕ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿ ಭಾರತೀಯಟ್ರೇಡ್ ಯೂನಿಯನ್ ಕೇಂದ್ರ (ಸಿಐಟಿಯು) ಉತ್ತರ ಪ್ರದೇಶ ಮತ್ತು ಹರಿಯಾಣದ ಬಿಜೆಪಿ ನೇತೃತ್ವದ ಸರ್ಕಾರಗಳು ನೋಯ್ಡಾ, ಗ್ರೇಟರ್ ನೋಯ್ಡಾ, ಗುರುಗ್ರಾಮ್ ಮತ್ತುರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿ (ಎನ್.ಸಿ.ಅರ್) ಕಾರ್ಮಿಕರ ಹೋರಾಟಗಳ ಮೇಲೆ ನಡೆಸುತ್ತಿರುವ ಕ್ರೂರ ದಮನವನ್ನು ಖಂಡಿಸುತ್ತದೆ.ಇದು ಕೇವಲ ಕೈಗಾರಿಕಾ ವಿವಾದವಲ್ಲ – ಇದು ನೇರ ವರ್ಗ ಸಂಘರ್ಷದ ಧೈರ್ಯಶಾಲಿ ಅಭಿವ್ಯಕ್ತಿ, ಇಲ್ಲಿ ಸರ್ಕಾರದಯಂತ್ರಾಂಗವುಕಾರ್ಪೊರೇಟ್ ಹಿತಾಸಕ್ತಿಗಳನ್ನು ರಕ್ಷಿಸಲು ಕಾರ್ಮಿಕರ ಹಕ್ಕುಗಳನ್ನು ತೀವ್ರ ತರವಾಗಿ ಕುಗ್ಗಿಸುತ್ತಿದೆ. ಹರಿಯಾಣ (ಮನೇಸರ, ಪಾಣಿಪತ್, ಸೋನಿಪತ್), ರಾಜಸ್ಥಾನ (ಭಿವಾಡಿ, ನೀಮ್ರಾಣ, ಅಲ್ವರ್), ಗುಜರಾತ್ (ಸುರತ್, ಹಜೀರಾ), ಬಿಹಾರ (ಬರೌನಿ) ಮತ್ತುಇತರಕೈಗಾರಿಕಾ ಕೇಂದ್ರಗಳ ಕಾರ್ಮಿಕರು ಶಾಶ್ವತ ಉದ್ಯೋಗಗಳಲ್ಲಿ ಗುತ್ತಿಗೆಕಾರ್ಮಿಕ ವ್ಯವಸ್ಥೆ, ಅತಿ ಕಡಿಮೆ ವೇತನ, ಅಮಾನವೀಯ ಕೆಲಸದ ಪರಿಸ್ಥಿತಿಗಳು, ಕಾರ್ಮಿಕ ವಿರೋಧಿ ಲೇಬರ್ ಕೋಡ್‌ಗಳು ಮತ್ತು ಸರ್ಕಾರದ ದಮನದ ವಿರುದ್ಧ ಏಕೀಕೃತ ಹೋರಾಟ ನಡೆಸಲಾಗುತ್ತದೆ. ಜಾಗತಿಕ ಯುದ್ಧದಿಂದ ಪ್ರೇರಿತ ಬೆಲೆ ಏರಿಕೆಯ ಪರಿಣಾಮ ಸಂಕಷ್ಟ ಹೆಚ್ಚಾಗಿದೆ. LPG ಬೆಲೆಗಳು 1 ಕೆಜಿ ಸಿಲಿಂಡರ್ 70ರಿಂದ 400–600ರವರೆಗೆ ಏರಿಕೆಯಾಗಿದೆ. ಆಹಾರ ಮತ್ತು ಅಗತ್ಯ ವಸ್ತುಗಳ ಬೆಲೆಗಳು ಕೂಡ ಏರಿವೆ. ಕಾರ್ಮಿಕರು, ವಿಶೇಷವಾಗಿ ವಲಸೆ ಕಾರ್ಮಿಕರು, ಬದುಕಿನ ಅಂಚಿನಲ್ಲಿದ್ದಾರೆ.ಈ ಸಮಸ್ಯೆಗಳನ್ನು ಪರಿಹರಿಸುವ ಬದಲು, ಬಿಜೆಪಿ ಸರ್ಕಾರಗಳು ದಮನ ಮತ್ತು ತಪ್ಪು ಪ್ರಚಾರವನ್ನು ಆರಿಸಿಕೊಂಡಿವೆ. 300–400ಕ್ಕೂ ಹೆಚ್ಚು ಕಾರ್ಮಿಕರನ್ನು ಬಂಧಿಸಲಾಗಿದೆ: ಅವರ ಮನೆಗಳು ಮತ್ತು ಹಳ್ಳಿಗಳ ಮೇಲೆ ದಾಳಿ ನಡೆಸಲಾಗಿದೆ; ಕುಟುಂಬಗಳನ್ನು ಭೀತಿ ಗೊಳಿಸಲಾಗಿದೆ. ಟ್ರೇಡ್ ಯೂನಿಯನ್ ನಾಯಕರು, ವಿಶೇಷವಾಗಿ ಸಿಐಟಿಯು ನಾಯಕರು, ಅನಧಿಕೃತವಾಗಿ ಬಂಧಿಸಲ್ಪಟ್ಟಿದ್ದಾರೆ. ಮಹಿಳಾ ಕಾರ್ಮಿಕರ ಮೇಲೆ ಕ್ರೂರ ಹಲ್ಲೆಗಳು ನಡೆದಿವೆ. ಹೋರಾಟವನ್ನು "ಬಾಹ್ಯ" ಅಥವಾ "ರಾಷ್ಟ್ರ ವಿರೋಧಿ" ಎಂದು ಕಳಪೆ ಪ್ರಚಾರ ನಡೆಸಲಾಗುತ್ತಿದೆ ಸಿಐಟಿಯು ಹೋರಾಟದಲ್ಲಿರುವ ಕಾರ್ಮಿಕರೊಂದಿಗೆ ದೃಢವಾಗಿ ನಿಂತಿದ್ದು, ಬಂಧಿತರನ್ನು ತಕ್ಷಣ ಮತ್ತುಯಾವುದೇ ಷರತ್ತುಗಳಿಲ್ಲದೆ ಬಿಡುಗಡೆ ಮಾಡಬೇಕು, ಸುಳ್ಳು ಪ್ರಕರಣಗಳನ್ನು ಹಿಂಪಡೆಯಬೇಕು, ದಮನವನ್ನು ನಿಲ್ಲಿಸಬೇಕು ಮತ್ತು ಅನಧಿಕೃತ ಬಂಧನಗಳನ್ನು ರದ್ದುಗೊಳಿಸಬೇಕು ಎಂದುಒತ್ತಾಯಿಸಿದರು,.



ಸಿಐಟಿಯು ರಾಜ್ಯ ಸಮಿತಿ 17 ಏಪ್ರಿಲ್ 2026 ರಂದು ದೇಶದ ಎಲ್ಲಾ ಕೈಗಾರಿಕಾ ಘಟಕಗಳು, ಕಾರ್ಖಾನೆ ದ್ವಾರಗಳು ಮತ್ತು ಕೈಗಾರಿಕಾ ಪ್ರದೇಶಗಳಲ್ಲಿ ಪ್ರತಿಭಟನೆಗಳನ್ನು ಸಂಘಟಿಸುವ ಕರೆಯ ಸಂಬಂಧ ಅಂತರಸನಹಳ್ಳಿ ಕೈಗಾರಿಕಾ ಪ್ರದೇಶದ ಕಾರ್ಮಿಕರು ಪ್ರತಿಭಟನೆಯನ್ನು ನಡೆಸಿದರು. ಈ ಪ್ರತಿಭಟನೆಯಲ್ಲಿ ಫಿಟ್ ವೆಲ್ ಟೂಲ್ಸ್ ಅಂಡ್ ಫೋರ್ಜಿಂಗ್ ಕಾರ್ಮಿಕ ಸಂಘದ ಪದಾಧಿಕಾರಿಗಳಾದಂತಹ ಕುಮಾರ್, ಪುಟ್ಟರಾಜು ಸಂಘದ ಸದಸ್ಯರುಗಳು ಹಾಗೂ ಗುತ್ತಿಗೆ ಕಾರ್ಮಿಕರು ಭಾಗವಹಿಸಿ, ಈ ಪ್ರತಿಭಟನೆಯನ್ನು ಯಶಸ್ವಿಗೊಳಿಸಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ವಿದ್ಯಾರ್ಥಿಗಳು ಪಠ್ಯಕ್ರಮಕ್ಕೆ ಸೀಮಿತವಾಗದೆ ಪಠ್ಯೇತರ ಚಟುವಟಿಕೆಯಲ್ಲಿ ತಮ್ಮ ಪ್ರತಿಭೆ ಗುರ್ತಿಸಬೇಕು

ಮಧುಗಿರಿ... ವಿದ್ಯಾರ್ಥಿಗಳು ಕೇವಲ ಪಠ್ಯಕ್ರಮಕ್ಕೆ ಸೀಮಿತವಾಗದೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಬಳಸಿಕೊಂಡು ಬೆಳೆಯಬೇಕು ಇಂದು ಮಿಡಿಗೇಶಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಕೆ ಸಿ ಬಸವರಾಜು ತಿಳಿಸಿದ್ದಾರೆ ನಡೆದ 2025 26 ನೇ ಸಾಲಿನ ಸಾಂಸ್ಕೃತಿಕ ಸಮಿತಿ ವತಿಯಿಂದ ನಡೆದ ಯುವ ಸೌರಭ 2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಯುವ ಸೌರಭ ಪ್ರತಿಭೆಗಳ ಅನಾವರಣಕ್ಕೆ ದೊಡ್ಡ ವೇದಿಕೆಯಾಗಿದೆ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು ಕಾರ್ಯಕ್ರಮದಲ್ಲಿ ಮಾತನಾಡಿದ ಕಲಾವಿದರಾದ ನೀರ ಕಲ್ಲು ನರಸಿಂಹಯ್ಯ ವಿದ್ಯಾರ್ಥಿಗಳು ಆಧುನಿಕತೆಯಲ್ಲಿ ಅತಿ ಹೆಚ್ಚಾಗಿ ಸೋಶಿಯಲ್ ಮೀಡಿಯಾ ಮೊಬೈಲ್ ಬಳಕೆ ಮಾಡುತ್ತಿದ್ದಾರೆ ಶಿಕ್ಷಣದ ಜೊತೆಗೆ ಕಲೆಯನ್ನು ಉಳಿಸಿಕೊಳ್ಳಬೇಕಾಗಿದೆ ನೃತ್ಯ ಸೋಬಾನೆ ಗೀತೆ ಲಾವಣಿ ಪದಗಳು ನಶಿಸುತ್ತಿವೆ ಪೀಳಿಗೆಗೆ ಯಾವುದೇ ಕಲೆಗಳನ್ನು ಪ್ರದರ್ಶನ ಮಾಡದೆ ಸ್ಥಳೀಯ ಕಲೆಗಳು ಈ ಸಮಾಜದಿಂದ ಕಳೆದುಹೋಗುತ್ತದೆ ಎಂದು ತಿಳಿಸಿದರು ಸಾಂಸ್ಕೃತಿಯ ಸಮಿತಿಯ ಸಂಚಾಲಕರಾದ ಪ್ರೊ ರಜಿನಿ ಮಾತನಾಡಿ ವಿದ್ಯಾರ್ಥಿಗಳ ಪ್ರತಿಭೆ ಅನಾವರಣಕ್ಕೆ ಯುವ ಸೌರಭ ಒಂದು ವೇದಿಕೆಯಾಗಿದೆ ಕಲೆ ಎಂಬುದು ಶ್ರಮಿಕನ ಸ್ವತ್ತೆ ಹೊರತು ಸೋಮಾರಿಯ ಸ್ವತ್ತಲ್ಲ ಯಾವುದೇ ಕಲೆ ಸಾರಿತವಾಗಬೇಕಾದರೆ ಕಠಿಣ ಅಭ್ಯಾಸ ಮೈಗೂಡಿಸಿಕೊಳ್ಳಬೇಕಾಗುತ್ತದೆ ಕಲಾ ಸಾಧಕರನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯವನ್ನು ಮಿಡಿಗೇಶಿ ಪ್ರಥಮ ದರ್ಜೆ ಕಾಲೇಜು ನಿರಂತರವಾಗಿ ಮಾಡಿಕೊಂಡು ಬಂದಿದೆ ಎಂದು ತಿಳಿಸಿದರು ಯುವ ಸೌರಭ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಕಲೆ ಸಂಸ್ಕೃತಿ ಪ್ರೋತ್ಸಾಹಕ್ಕಾಗಿ ಗಾಯನ ಸ್ಪರ್ಧೆ ನೃತ್ಯ ಸ್ಪರ್ಧೆ ಪ್ರಬಂಧ ಸ್ಪರ್ಧೆ ರಸಪ್ರಶ್ನೆ ಸ್ಪರ್ಧೆ ಬೆಂಕಿ ರೈತ ಅಡುಗೆ ಚರ್ಚಾ ಸ್ಪರ್ಧೆ ಮೊದಲಾದ ಚಟುವಟಿಕೆಗಳು ಯಶಸ್ವಿಯಾಗಿ ನಡೆಸಲಾಯಿತು. ಕಾರ್ಯಕ್ರಮದಲ್ಲಿ ತೀರ್ಪುಗಾರರಾಗಿ ಪ್ರೊ ಅನುಪಮಾ ಪ್ರೊ ಪುಟ್ಟರಾಜು ಡಾ ಎಲ್ ಮಂಜುನಾಥ್ ಪ್ರೊ ಚಂದನ. ಷಣ್ಮುಖ ಆಚಾರಿ .. ರಾಮಚಂದ್ರಯ್ಯ ತಿಪ್ಪೇಸ್ವಾಮಿ ಎಂಕೆ ಹಿಂದುಜಾ ಜಾಂಭವಿ ವಿದ್ಯಾರ್ಥಿಗಳಾದ ಮನೋಹರ್ ಪ್ರದೀಪ್ ಮೈತ್ರಿ ಧನುಷ್ ಯಾದವ್ ಮುಂತಾದವರು ಹಾಜರಿದ್ದರು




# ಗುಬ್ಬಿ ಪೊಲೀಸ್ ಠಾಣೆಯಲ್ಲಿ ಜಖಂ ವಾಹನಗಳ ಹರಾಜು

ವರದಿ ಗುಬ್ಬಿ ಭರತ್

ಗುಬ್ಬಿ : ಪಟ್ಟಣದ ಪೊಲೀಸ್ ಠಾಣೆಯಲ್ಲಿನ ವಾರಸುದಾರರಿಲ್ಲದೆ ಸಂಪೂರ್ಣ ಜಖಂಗೊಂಡ 01 ಬಸ್ ಸೇರಿದಂತೆ 9 ದ್ವಿಚಕ್ರ ವಾಹನಗಳನ್ನು ಸರ್ಕಾರದ ಆದೇಶದಂತೆ ಹರಾಜು ಪ್ರಕ್ರಿಯೆಯನ್ನು ಮಾಡಿ ವಾಹನಗಳನ್ನು ವಿಲೇವಾರಿ ಮಾಡಲಾಯಿತು.

ಪಟ್ಟಣದ ಸುಭಾಷ್ ನಗರ ಬಡಾವಣೆಯಲ್ಲಿನ ಪೊಲೀಸ್ ಠಾಣೆ ಮುಂಭಾಗದಲ್ಲಿ ನಡೆದ ಹರಾಜು ಪ್ರಕ್ರಿಯೆಯಲ್ಲಿ ನೂರಾರು ಮಂದಿ ಮೆಕ್ಯಾನಿಕ್ ವೃತ್ತಿ ಹಾಗೂ ಗುಜುರಿ ವ್ಯಾಪಾರಿಗಳು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

ಡಿವೈಎಸ್ಪಿ ಶೇಖರ್ ನೇತೃತ್ವದಲ್ಲಿ ನಡೆದ ಹರಾಜು ಪ್ರಕ್ರಿಯೆಯನ್ನು ಗುಬ್ಬಿ ವೃತ್ತ ನಿರೀಕ್ಷಕ ರಾಘವೇಂದ್ರ ನಡೆಸಿಕೊಟ್ಟರು. ಹರಾಜು ಪ್ರಕ್ರಿಯೆಯಲ್ಲಿ ಗುಬ್ಬಿ ತಾಲೂಕಿನ ಹಲವು ಮಂದಿ ಸಾರ್ವಜನಿಕರು ಭಾಗಿಯಾಗಿ ಸರ್ಕಾರಿ ಬೀಟ್ ಮೊತ್ತ ಹೊರತು ಪಡಿಸಿ ಹೆಚ್ಚಿನ ಹಣಕ್ಕೆ ದ್ವಿಚಕ್ರ ವಾಹನಗಳನ್ನು ಹರಾಜಿನಲ್ಲಿ ಕೂಗಿದರು. ನಂತರ ಹಣ ಪಾವತಿಸಿ ನಿಯಮಾನುಸಾರ ಸಹಿ ಮಾಡಿ ವಾಹನ ಸಾಗಿಸಿದರು.



ಹಲವು ವರ್ಷಗಳಿಂದ ಠಾಣೆಯ ಬಳಿ ನಿಂತಿದ್ದ ಸುಮಾರು 09 ದ್ವಿಚಕ್ರ ವಾಹನ ಸೇರಿದಂತೆ ಖಾಸಗಿ ಪಿಯು ಕಾಲೇಜಿನ ಒಂದು ಬಸ್ಸನ್ನು ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಸಾರಿಗೆ ಇಲಾಖೆ ನಿಗದಿ ಮಾಡಿದ ಸರ್ಕಾರಿ ಮೊತ್ತಕ್ಕಿಂತ ಹೆಚ್ಚಿನ ಹಣಕ್ಕೆ ಸ್ಕ್ರ್ಯಾಪ್ ವಾಹನಗಳ ಖರೀದಿ ಮಾಡಿದರು.

ಇದೇ ಸಂದರ್ಭದಲ್ಲಿ ಶಿರಾ ವಿಭಾಗದ ಡಿವೈಎಸ್ಪಿ ಶೇಖರ್, ಗುಬ್ಬಿ ವೃತ್ತ ನಿರೀಕ್ಷಕ ರಾಘವೇಂದ್ರ ಪಿಎಸ್ ಐ ರಾಮಚಂದ್ರಪ್ಪ ಸೇರಿದಂತೆ ಗುಬ್ಬಿ ಪೊಲೀಸ್ ಠಾಣೆ ಎಲ್ಲಾ ಸಿಬ್ಬಂದಿಗಳು ಸ್ಥಳದಲ್ಲಿದ್ದರು.

# ತಾಪಮಾನ ಹೆಚ್ಚಳ : ಸಾರ್ವಜನಿಕರು ಜಾಗೃತಿಯಿಂದಿರಲು ಆರೋಗ್ಯ ಇಲಾಖೆ ಮನವಿ

ತುಮಕೂರು: ಪ್ರಸ್ತುತ ವರ್ಷದ ಬೇಸಿಗೆಯು ಪ್ರಖರವಾಗಿರುವ ಸಾಧ್ಯತೆಗಳ ಬಗ್ಗೆ ವರದಿ ಬಂದಿರುವ ಹಿನ್ನೆಲೆಯಲ್ಲಿ ಮುಖ್ಯವಾಗಿ ಚಿಕ್ಕ ಮಕ್ಕಳು, ಗರ್ಭಿಣಿ, ಬಾಣಂತಿಯರು, ವಯೋವೃದ್ಧರ ಕಾಳಜಿಗಾಗಿ ಕುಟುಂಬದ ಸದಸ್ಯರು ಹೆಚ್ಚಿನ ಆದ್ಯತೆ ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ|| ಚಂದ್ರಶೇಖರ್ ಮನವಿ ಮಾಡಿದ್ದಾರೆ.

**ನವಜಾತ ಶಿಶುವಿನ ಕಾಳಜಿ :**

ಹೆರಿಗೆ ನಂತರ ಬಾಣಂತಿಯರು ನವಜಾತ ಶಿಶುವಿಗೆ ಮೇಲಿಂದ ಮೇಲೆ ಎದೆ ಹಾಲುಣಿಸುವ ಮೂಲಕ ಶಿಶುವಿನಲ್ಲಾಗುವ ನಿರ್ಜಲೀಕರಣ ತಡೆಯಲು ಸಹಕಾರಿಯಾಗುತ್ತದೆ ಹಾಗೂ ರೋಗ ನಿರೋಧಕ ಶಕ್ತಿ ವೃದ್ಧಿಸಲು 12 ಮಾರಕ ರೋಗಗಳ ವಿರುದ್ಧ ಲಸಿಕೆ ಹಾಕಿಸಬೇಕು.

**ಗರ್ಭಿಣಿ ಬಾಣಂತಿಯರ ಆರೈಕೆ:**

ಪ್ರಖರ ಬಿಸಿಲಿನ ಅವಧಿಯಲ್ಲಿ ಆದಷ್ಟು ಮನೆಯ ಹೊರಗೆ ಹೋಗದಂತೆ ಮುತವರ್ಜಿ ವಹಿಸಿ, ಮನೆಯ ಒಳಗೆ ಅಥವಾ ನೆರಳು ಇರುವ ಸ್ಥಳದಲ್ಲಿ ವಿಶ್ರಾಂತಿ ಪಡೆಯಬೇಕು. ಆದಷ್ಟು ಮಸಾಲೆಯುಕ್ತ ಪದಾರ್ಥಗಳ ಸೇವನೆ ಕಡಿಮೆ ಮಾಡಬೇಕು. ವಯೋವೃದ್ಧರು



ಹಾಗೂ ದೀರ್ಘಾವಧಿ ಕಾಯಿಲೆಯಿಂದ ಬಳಲುವವರ ಆರೈಕೆ: ಅಧಿಕ ಬಿಸಿಲಿರುವ ಸಮಯದಲ್ಲಿ ಮನೆಯ ಹೊರಗೆ ಹೋಗಬಾರದು. ದೈನಂದಿನವಾಗಿ ತೆಗೆದುಕೊಳ್ಳುವ ಮಾತ್ರೆಗಳನ್ನು ಜೊತೆಯಲ್ಲಿರಿಸಿಕೊಳ್ಳಬೇಕು. ದ್ರವ ಆಹಾರ ಹೆಚ್ಚು ಸೇವಿಸಬೇಕು.

**ಚಿಕ್ಕ ಮಕ್ಕಳ ಆರೈಕೆಗೆ ಕಾಳಜಿ :**

ಆಟವಾಡುವ ಮಕ್ಕಳು ಬಿಸಿಲಿನಲ್ಲಿ ನಿಲ್ಲಿಸಿರುವ ವಾಹನ ಮುಟ್ಟದಂತೆ ಜಾಗೃತಿ ವಹಿಸಬೇಕು. ಮಕ್ಕಳು ಅಸುರಕ್ಷಿತ ಆಹಾರ, ಪಾನೀಯ ಸೇವಿಸದಂತೆ ನಿಗಾವಹಿಸಬೇಕು.

**ಓಆರ್‌ಎಸ್ ಜೀವಜಲ ಬಳಕೆಗೆ ಆದ್ಯತೆ ನೀಡಿ :**

ನಿರ್ಜಲೀಕರಣದಿಂದ ದೇಹದ ನೀರಿನ ಅಂಶದ ಜೊತೆಗೆ ಲವಣಾಂಶ ಕಡಿಮೆಯಾಗದಂತೆ ಓಆರ್‌ಎಸ್ ಜೀವ ಜಲ ಪೊಟ್ಟಣ ಸದಾ ಮನೆಯಲ್ಲಿರಬೇಕು. ಒಂದು ಲೀಟರ್ ನೀರಿಗೆ ಪೊಟ್ಟಣದ ಸಂಪೂರ್ಣ ಪುಡಿ ಹಾಕಿ ದ್ರಾವಣ ಸಿದ್ದಪಡಿಸಿ 24 ಗಂಟೆಯೊಳಗೆ ಬಳಸಬೇಕು. ಇದಲ್ಲದೆ ಲಿಂಬೂ ಪಾನಕ, ಎಳೆನೀರು, ಮಜ್ಜಿಗೆ ಕುಡಿಯಬಹುದು. ಆಹಾರದಲ್ಲಿ ಬೇಳೆ ತಿಳಿ ಬಳಸಬೇಕು.

**ವಾಂತಿ ಬೇಧಿ ತಡೆ:**

ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನೆಲೆಯಲ್ಲಿ ಶುದ್ಧೀಕರಿಸಿದ ನೀರು ಅಥವಾ ನೀರು ಶುದ್ಧೀಕರಣ ಘಟಕದ ನೀರನ್ನು ಕುಡಿಯಲು ಬಳಸಬೇಕು. ಅಲ್ಲದೆ, ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ,

NATIONAL HEALTH MISSION
राष्ट्रीय स्वास्थ्य मिशन

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ**

ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಿ. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಸೇವಿಸಬಾರದು, ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು.

ಅಲ್ಲದೆ, ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಮುಂಜಾಗ್ರತಾ ಔಷಧಿಗಳು ಲಭ್ಯವಿದ್ದು, ಯಾವುದೇ ತುರ್ತು ಸಂದರ್ಭದಲ್ಲಿ 108 ಕ್ಕೆ ಕರೆ ಮಾಡಿ ಆಂಬ್ಯುಲೆನ್ಸ್ ಸದುಪಯೋಗ ಪಡೆದುಕೊಳ್ಳಬಹುದೆಂದು ಅವರು ಮನವಿ ಮಾಡಿದ್ದಾರೆ.

# ರಸಗೊಬ್ಬರ ಖರೀದಿಗೆ ಇನ್ಮುಂದೆ 'ಎಫ್‌ಐಡಿ' ಕಡ್ಡಾಯ ಕಾಳಸಂತೆ ತಡೆಗೆ ಕೃಷಿ ಇಲಾಖೆ ಖಡಕ್ ಕ್ರಮ

ಹುಳಿಯಾರು: ರೈತರು ಮುಂಗಾರು ಹಂಗಾಮಿನಲ್ಲಿ ಯೂರಿಯಾ ಸೇರಿದಂತೆ ರಸಗೊಬ್ಬರ ಖರೀದಿಸಲು ಇನ್ನು ಮುಂದೆ ಫಾರ್ಮರ್ ಐಡಿ (ಈಖಏ) ಸಂಖ್ಯೆ ಹೊಂದಿರುವುದನ್ನು ಕೃಷಿ ಇಲಾಖೆ ಕಡ್ಡಾಯಗೊಳಿಸಿದೆ. 2026–27 ನೇ ಸಾಲಿನ ಮುಂಗಾರು ಹಂಗಾಮಿನಿಂದಲೇ ಈ ಹೊಸ ನಿಯಮ ಜಾರಿಗೆ ಬರಲಿದ್ದು, ಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆ ತರುವುದು ಇದರ ಮುಖ್ಯ ಉದ್ದೇಶವಾಗಿದೆ.



**ಕೆ–ಕಿಸಾನ್ ತಂತ್ರಾಂಶದ ಮೂಲಕ ವಿತರಣೆ**

ರಸಗೊಬ್ಬರವು ಅರ್ಹ ರೈತರಿಗೆ ಮಾತ್ರ ತಲುಪಬೇಕು ಮತ್ತು ಕಾಳಸಂತೆಯಲ್ಲಿ ಮಾರಾಟವಾಗುವುದನ್ನು ತಡೆಗಟ್ಟಲು ಇಲಾಖೆ ಈ ನಿರ್ಧಾರ ಕೈಗೊಂಡಿದೆ. 'ಕೆ–ಕಿಸಾನ್' ತಂತ್ರಾಂಶದ ಮೂಲಕ ರೈತರ ಜಮೀನಿನ ವಿಸ್ತೀರ್ಣ ಮತ್ತು ಅವರು ಬೆಳೆದಿರುವ ಬೆಳೆಗೆ ಅನುಗುಣವಾಗಿ ಎಷ್ಟು ಪ್ರಮಾಣದ ಗೊಬ್ಬರ ಅಗತ್ಯವಿದೆಯೋ, ಅಷ್ಟನ್ನು




ಮಾತ್ರ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ.

**ಮಾರಾಟಗಾರರಿಗೆ ಎಚ್ಚರಿಕೆ:**

ಅಧಿಕೃತ ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ಕೆ–ಕಿಸಾನ್ ತಂತ್ರಾಂಶದಲ್ಲಿ ರೈತರ ಎಫ್‌ಐಡಿ ನಮೂದಿಸಿಯೇ ವ್ಯಾಪಾರ ಮಾಡಬೇಕು. ಈ ಕುರಿತು ಅಧಿಕಾರಿಗಳಿಗೆ ಈಗಾಗಲೇ ತರಬೇತಿ ನೀಡಲಾಗಿದೆ. ಚಿಲ್ಲರೆ ಮಾರಾಟಗಾರರು ತಮ್ಮ 'ಓ ಫಾರಂ' (ಔ–ಈಡಿಟ) ಅನ್ನು ಕಡ್ಡಾಯವಾಗಿ ನವೀಕರಿಸಿಕೊಳ್ಳಬೇಕು. ನೋಂದಣಿ ಇಲ್ಲದೆ ಮಾರಾಟ ಮಾಡುವುದು, ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರುವುದು ಅಥವಾ ಕೃಷಿಯೇತರ ಉದ್ದೇಶಗಳಿಗೆ ಗೊಬ್ಬರ ನೀಡಿದಲ್ಲಿ ಅಂತಹ ಮಾರಾಟಗಾರರ ಪರವಾನಗಿಯನ್ನು ತಕ್ಷಣವೇ ರದ್ದುಗೊಳಿಸಲಾಗುವುದು ಎಂದು ಇಲಾಖೆ ಎಚ್ಚರಿಸಿದೆ.

**ನೋಂದಣಿಗೆ ಏನು ಮಾಡಬೇಕು?**

ಇದುವರೆಗೆ ಎಫ್‌ಐಡಿ ಹೊಂದಿರದ ರೈತರು ತಕ್ಷಣವೇ ಈ ಕೆಳಗಿನ ದಾಖಲೆಗಳೊಂದಿಗೆ ನೋಂದಣಿ ಮಾಡಿಕೊಳ್ಳಲು ಕೋರಲಾಗಿದೆ:

**ಅಗತ್ಯ ದಾಖಲೆಗಳು:** ಪಹಣಿ (RTC), ಬ್ಯಾಂಕ್ ಪಾಸ್‌ಬುಕ್ ಮತ್ತು ಆಧಾರ್ ಕಾರ್ಡ್.

ನೋಂದಣಿ ಸ್ಥಳ: ಹತ್ತಿರದ ರೈತ ಸಂಪರ್ಕ ಕೇಂದ್ರ, ತೋಟಗಾರಿಕೆ ಇಲಾಖೆ ಅಥವಾ ಸಾಮಾನ್ಯ ಸೇವಾ ಕೇಂದ್ರಗಳು (CSC)

**ಸರ್ವೆ ನಂಬರ್ ಜೋಡಣೆ:** ಈಗಾಗಲೇ ಎಫ್‌ಐಡಿ ಹೊಂದಿರುವ ರೈತರು ತಮ್ಮ ಉಳಿದ ಎಲ್ಲಾ ಸರ್ವೆ ನಂಬರ್‌ಗಳನ್ನು ಈ ಐಡಿಗೆ ಜೋಡಣೆ ಮಾಡಿಸಿಕೊಳ್ಳಲು ಅವಕಾಶ ನೀಡಲಾಗಿದೆ.

"ತಾಲ್ಲೂಕಿನ ಸುಮಾರು 18,564 ರೈತರಿಗೆ ಆಡಿಯೋ ಕಾನ್ಫರೆನ್ಸ್ ಮೂಲಕ ಈಗಾಗಲೇ ಜಾಗೃತಿ ಮೂಡಿಸಲಾಗಿದೆ. ಎಲ್ಲಾ ಮಳಿಗೆಗಳ ಮಾಲೀಕರ ಸಭೆ ನಡೆಸಿ, ಎಫ್‌ಐಡಿ ಮೂಲಕವೇ ಮಾರಾಟ ಮಾಡುವಂತೆ ಸೂಚನೆ ನೀಡಲಾಗಿದೆ."

ಎಚ್.ಎಸ್.ಶಿವರಾಜ್‌ಕುಮಾರ್,
ಸಹಾಯಕ ಕೃಷಿ ನಿರ್ದೇಶಕರು, ಚಿಕ್ಕನಾಯಕನಹಳ್ಳಿ.

# ಕರ್ನಾಟಕ ಲೋಕಾಯುಕ್ತದ ನಾಲ್ಕು ದಶಕಗಳ ಸಾರ್ಥಕ ಪಯಣ: ಏಪ್ರಿಲ್ 18 ರಂದು ವಿಶೇಷ ಕಾರ್ಯಕ್ರಮ



ಭ್ರಷ್ಟಾಚಾರ ನಿರ್ಮೂಲನೆ ಮತ್ತು ಆಡಳಿತ ಸುಧಾರಣೆಯಲ್ಲಿ ಮಹತ್ತರ ಪಾತ್ರ ವಹಿಸಿರುವ 'ಕರ್ನಾಟಕ ಲೋಕಾಯುಕ್ತ' ಸಂಸ್ಥೆಯು ತನ್ನ ಯಶಸ್ವಿ ನಾಲ್ಕು ದಶಕಗಳ ಪಯಣವನ್ನು ಪೂರೈಸಿದ್ದು, ಈ ಅಂಗವಾಗಿ 2026ರ ಏಪ್ರಿಲ್ 18, ಶನಿವಾರದಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕದ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರುಗಳಾದ ಕೆ.ಎನ್. ಫಣೀಂದ್ರ ಮತ್ತು ಬಿ. ವೀರಪ್ಪ ಅವರ ಘನ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮವು ಜರುಗಲಿದೆ. ಈ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಲೋಕಾಯುಕ್ತ ನಿಯತಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ ಚುನಾಯಿತ ಪ್ರತಿನಿಧಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಹೊಸ ಪೋರ್ಟಲ್ ಹಾಗೂ ಆನ್‌ಲೈನ್ ತನಿಖಾ ಮಾಡ್ಯೂಲ್‌ಗೆ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಮಾಜಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರನ್ನು ಸನ್ಮಾನಿಸಲಾಗುವುದು.

ಸಭಾ ಕಾರ್ಯಕ್ರಮದ ನಂತರ ಸಂಜೆ 4:30 ರಿಂದ 6:00 ರವರೆಗೆ ವಿಶೇಷ ವಿಚಾರಗೋಷ್ಠಿಗಳು ನಡೆಯಲಿದ್ದು, ನಂತರ ಭ್ರಷ್ಟಾಚಾರದ ವಿರುದ್ಧದ ಹೋರಾಟ ಕುರಿತು ವಿವಿಧ ಗೋಷ್ಠಿಗಳು ನಡೆಯಲಿವೆ.

ಭ್ರಷ್ಟಾಚಾರ ಮತ್ತು ದುರಾಡಳಿತ ವಿರುದ್ಧ ಹೋರಾಟದ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ.ಎಸ್. ಪಾಟೀಲ್, ಲೋಕಾಯುಕ್ತ ಕಾಯ್ದೆಯಡಿ ಕುಂದುಕೊರತೆಗಳ ಪರಿಹಾರ ವಿಷಯದ ಮೇಲೆ ನಿವೃತ್ತ ನ್ಯಾಯಮೂರ್ತಿಗಳಾದ ಕೆ.ಎನ್. ಫಣೀಂದ್ರ ಹಾಗೂ ಭ್ರಷ್ಟಾಚಾರ ತಡೆಗಟ್ಟುವುದು ಹೇಗೆ? ಎಂಬುದರ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ವಿಚಾರಗೋಷ್ಠಿ ನಡೆಲಿಸಲಿದ್ದಾರೆ.

ಕರ್ನಾಟಕ ಲೋಕಾಯುಕ್ತ ಸಂಸ್ಥೆಯು ತನ್ನ ಅರ್ಥಪೂರ್ಣ ಹಾಗೂ ಅವಿರತ ಸೇವೆಯ 40 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ್ದು, ಈ ಸುದೀರ್ಘ ಅವಧಿಯಲ್ಲಿ ಸಂಸ್ಥೆಯು ಹಲವಾರು ಸವಾಲುಗಳನ್ನು ಎದುರಿಸಿದ್ದರೂ ಸಹ, ಸಾರ್ವಜನಿಕ ಸೇವೆಯಲ್ಲಿನ ಭ್ರಷ್ಟಾಚಾರ, ಸ್ವಜನಪಕ್ಷಪಾತ ಹಾಗೂ ಆಡಳಿತ ದುರುಪಯೋಗದ ವಿರುದ್ಧದ ಹೋರಾಟದಲ್ಲಿ ಸದಾ ಸ್ಥಿತಪ್ರಜ್ಞವಾಗಿ ಕಾರ್ಯ ನಿರ್ವಹಿಸಿಕೊಂಡು ಬಂದಿದೆ.

ಸಮಾಜದಲ್ಲಿ ಭ್ರಷ್ಟಾಚಾರವು ಭಯಾನಕ ರೀತಿಯಲ್ಲಿ ಬೆಳೆಯುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ ಎಂಬ ಟೀಕೆಗಳಿದ್ದರೂ ಸಹ, ಧನಾತ್ಮಕ ಚಿಂತನೆ ಹಾಗೂ ಪರಿಶ್ರಮದಿಂದ ಭ್ರಷ್ಟಾಚಾರವನ್ನು ಹತ್ತಿಕ್ಕಬಹುದು ಎಂಬ ವಿಶ್ವಾಸವನ್ನು ಸಂಸ್ಥೆಯು ಮೂಡಿಸಿದೆ. ಜೀವನದ ಹಾದಿಯಲ್ಲಿ ಬರುವ ಕಠಿಣ ಸವಾಲುಗಳನ್ನು ಧೈರ್ಯ ಮತ್ತು ತಾಳ್ಮೆಯಿಂದ ಎದುರಿಸಿದಾಗ ಮಾತ್ರ ಯಶಸ್ಸು ಸಾಧ್ಯ.

ಆಮಿಷಗಳಿಗೆ ಒಳಗಾಗದ, ಅಧಿಕಾರದ ಆಸೆಗೆ ಮಣಿಯದ ಮತ್ತು ದೃಢ ಸಂಕಲ್ಪವುಳ್ಳ ಪ್ರಾಮಾಣಿಕ ವ್ಯಕ್ತಿಗಳ ಅಗತ್ಯತೆ ಇಂದು ಹೆಚ್ಚಿದೆ. ಸಾರ್ವಜನಿಕ ಹಿತಾಸಕ್ತಿಯೇ ಪರಮ ಗುರಿಯಾಗಿಸಿಕೊಂಡು ಕೆಲಸ ಮಾಡುವ ವ್ಯಕ್ತಿಗಳನ್ನು ನಾವು ಪ್ರೋತ್ಸಾಹಿಸಬೇಕಿದೆ. ಎಂತಹದೇ ನಿರಾಸೆ ಎದುರಾದರೂ ಶಾಂತ ಮತ್ತು ಸ್ಥಿರವಾದ ದೃಢತೆಯೊಂದಿಗೆ ಭ್ರಷ್ಟಾಚಾರದ ವಿರುದ್ಧದ ಹೋರಾಟ ಮುಂದುವರಿಯಬೇಕು.

ಒಟ್ಟಾರೆಯಾಗಿ, ಪ್ರಾಮಾಣಿಕ ವ್ಯಕ್ತಿಗಳನ್ನು ಬೆಳೆಸುವಲ್ಲಿ ನಾವು ವಿಫಲವಾದರೆ ಅನ್ಯಾಯವು ಗೆದ್ದು, ನ್ಯಾಯವು ಮರೆಯಾಗುವ ಅಪಾಯವಿದೆ ಎಂದು ಸಂಸ್ಥೆಯು ಎಚ್ಚರಿಸಿದೆ. ಸವಾಲುಗಳೇ ವ್ಯಕ್ತಿಯನ್ನು ಪರಿಪೂರ್ಣಗೊಳಿಸುತ್ತವೆ ಎಂಬ ಧ್ಯೇಯವಾಕ್ಯದೊಂದಿಗೆ ಲೋಕಾಯುಕ್ತವು ನಾಲ್ಕು ದಶಕಗಳನ್ನು ದಾಟಿ ಮುಂದಿನ ಹೆಜ್ಜೆಯನ್ನು ಇಡುತ್ತಿದೆ.

ರೇವಣಸಿದ್ದೇಶ್ವರ ಸ್ವಾಮಿ ಮಹಾರಥೋತ್ಸವ

ರಾಮನಗರ ತಾಲ್ಲೂಕಿನ ಕೈಲಾಂಚ ಹೋಬಳಿಯ ಅವ್ವೇರಹಳ್ಳಿಯ ಶ್ರೀ ರೇವಣಸಿದ್ದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಸೇವಾ ಟ್ರಸ್ಟ್ (ರಿ) ವತಿಯಿಂದ ಮೇ 1ರ ಶುಕ್ರವಾರ ಮಹಾರಥೋತ್ಸವ ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 6 ರಿಂದ 10ರ ವರೆಗೆ ರಥಬೀದಿ ಅಲಂಕಾರ, 7.30 ರಿಂದ 9.30ರ ವರೆಗೆ ಭಕ್ತವೃಂದಕ್ಕೆ ಸಾಮೂಹಿಕ ಉಪಹಾರ, ಸಾಂಸ್ಕೃತಿಕ ಕಾರ್ಯಕ್ರಮ (ವೀರಗಾಸೆ, ಡೊಳ್ಳು ಕುಣಿತ), ರಂಗೋಲಿ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ, ನೃತ್ಯ, 12 ಗಂಟೆಯ ನಂತರ ಟ್ರಸ್ಟಿನ ನೂತನ ಭವನದಲ್ಲಿ ಭಕ್ತರಿಗೆಲ್ಲಾ ಸಾಮೂಹಿಕ ಮಹಾಪ್ರಸಾದ ವಿನಿಯೋಗ ಆಯೋಜಿಸಲಾಗಿದೆ. ಮೇ 3ರ ಭಾನುವಾರ

# ಹುಳಿಯಾರಿಗೊಂದು ಅಗ್ನಿಶಾಮಕ ಠಾಣೆ ಪ್ರಾರಂಭ ಪ್ರಕ್ರಿಯೆಯಲ್ಲಿದೆ – ಶಾಸಕ ಸಿ.ಬಿ.ಸುರೇಶ್‌ಬಾಬು

ಚಿಕ್ಕನಾಯಕನಹಳ್ಳಿ:–ಅಗ್ನಿಶಾಮಕ ಸಿಬ್ಬಂದಿಯ ಕಾರ್ಯವೈಖರಿಯನ್ನು ಎಲ್ಲರೂ ಮೆಚ್ಚುವಂತದ್ದು ನಮ್ಮ ತಾಲ್ಲೂಕು ವಿಶಾಲವಾದ ವಿಸ್ತೀರ್ಣಹೊಂದಿರುವುದರಿಂದ ಹುಳಿಯಾರು ಭಾಗದಲ್ಲೊಂದು ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸಲು ಈಗಾಗಲೇ ಪ್ರಕ್ರಿಯೆ ಪ್ರಾರಂಭವಾಗಿದೆ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಪಟ್ಟಣದ ಹೊರವಲಯದ ಅಗ್ನಿಶಾಮಕಠಾಣೆಯಲ್ಲಿ ಮಂಗಳವಾರ ಏರ್ಪಡಿಸಲಾಗಿದ್ದ ಅಗ್ನಿಶಾಮಕ ಸೇವಾ ಸಪ್ತಾಹ ದಿನಾಚರಣೆ ಹಾಗೂ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು ಅಗ್ನಿಅವಘಡಗಳು ಸೇರಿದಂತೆ ಇತರೆ ಪ್ರಕೃತಿ ವಿಕೋಪಗಳು, ಸಾರ್ವಜನಿಕ ಆಸ್ತಿಪಾಸ್ತಿ ರಕ್ಷಣೆಯ ಕಾರ್ಯದಲ್ಲಿ ಜೀವದ ಹಂಗನ್ನು ತೊರೆದು ಕೆಲಸ ಮಾಡುವಂತಹ ಅಗ್ನಿಶಾಮಕ ಸಿಬ್ಬಂದಿಯ ಕಾರ್ಯವನ್ನು ನಾವು ಮೆಚ್ಚಬೇಕಿದೆ ಇಂತಹ ಸಂದರ್ಭದಲ್ಲಿ ತಮ್ಮ ಪ್ರಾಣವನ್ನು ಕಳೆದುಕೊಂಡಂತಹ ಸಿಬ್ಬಂದಿಗಳ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿರುವುದು ಎಲ್ಲರ ಕರ್ತವ್ಯವಾಗಿದೆ ಎಂದ ಅವರು ಬೇಸಿಗೆ ಅವಧಿಯಲ್ಲಿ ಹೆಚ್ಚು ಅಗ್ನಿದುರಂತಗಳು ಸಂಭವಿಸುವದರಿಂದ ಹುಳಿಯಾರು




ಭಾಗಕ್ಕೆ ಹೋಗಲು ದೂರವಾಗುತ್ತದೆ ಎಂಬುದನ್ನು ಅರಿತು ಆ ಭಾಗದಲ್ಲಿ ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸಲು ಸರ್ಕಾರದೊಂದಿಗೆ ಪತ್ರವ್ಯವಹಾರ ಮಾಡಿದ್ದು ಇನ್ನು ಕಂಪನಹಳ್ಳಿಯ ಬಳಿಯ ಸರ್ವೆನಂಬರ್ 23ರಲ್ಲಿ ಜಾಗವನ್ನು ಗುರುತಿಸಿದ್ದು ಅದರ ಪ್ರಕ್ರಿಯೆಯು ಇಲಾಖೆಗಳ ಹಂತದಲ್ಲಿ ನಡೆಯುತ್ತಿದೆ ಹಾಗೂ ತಾಲ್ಲೂಕು ಕೇಂದ್ರದಲ್ಲಿರುವಂತಹ ಠಾಣೆಯಲ್ಲಿ ಒಂದು ವಾಹನವಿದ್ದು ಇನ್ನೊಂದು ವಾಹವನ್ನು ನೀಡುವಂತೆಯು ಸರ್ಕಾರಕ್ಕೆ ಮನವಿಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಠಾಣಾಧಿಕಾರಿ ರಮೇಶ್ ಶಾಸಕರಿಗೆ ಮನವಿ ನೀಡಿ ನಮ್ಮ ಠಾಣೆಯ ಮುಂಭಾಗದಿಂದ ಮುಖ್ಯರಸ್ತೆಗೆ ಹೋಗುವ ಮದ್ಯೆದಲ್ಲಿ ಕಾಂಕ್ರೀಟ್ ರಸ್ತೆಯನ್ನು ನಿರ್ಮಿಸುವಂತೆ ಹಾಗೂ ಹುಳಿಯಾರು ಭಾಗದಲ್ಲಿ ಇನ್ನೊಂದು ಅಗ್ನಿಶಾಮಕ ಠಾಣೆಯನ್ನು ನಿರ್ಮಿಸುವಂತೆಯು ಮತ್ತು ಠಾಣೆಯಲ್ಲಿ ಒಂದು ಹುತಾತ್ಮರ ಸ್ಮಾರಕವನ್ನು ನಿರ್ಮಿಸಿಕೊಡುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಶಾಸಕರು ಗೌರವವಂದನೆ ಸ್ವೀಕರಿಸಿ ಹುತಾತ್ಮ ಅಗ್ನಿಶಾಮಕ ಸಿಬ್ಬಂದಿಗೆ ಚಿರಶಾಂತಿ ಕೋರಿದರು ನಂತರ ಅಗ್ನಿಶಾಮಕ ಸಿಬ್ಬಂದಿಯ ಕಾರ್ಯವೈಖರಿಯ ಬಗ್ಗೆ ಒಂದು ಪ್ರಾತ್ಯಕ್ಷಿಕೆಯನ್ನು ವೀಕ್ಷಿಸಿದರು

ಈ ಸಂದರ್ಭದಲ್ಲಿ ಅಗ್ನಿಶಾಮಕ ಠಾಣೆಯ ಸಿಬ್ಬಂದಿಗಳಾದ ಲೀಡರ್‌ಗಳಾದ ವೈ.ನಾಗರಾಜು,ನವೀನ್‌ಕುಮಾರ್ ವೈ.ಎಸ್, ಪ್ರಕಾಶ್ ಸಿ.ಇ, ಚಂದ್ರಗುಪ್ತ, ಬಾಗಣ್ಣ, ಅವಿನಾಶ್, ಬಸವರಾಜು ಸೇರಿದಂತೆ ಸಿಬ್ಬಂದಿಗಳು ಇದ್ದರು.

# ರಂಗಭೂಮಿಗೆ ತನ್ನದೇ ಆದ ವೈಶಿಷ್ಟ್ಯತೆ ಕಲಾವಿದನ ಸಾಧನೆಗೆ ಕಲಾ ಪ್ರೋತ್ಸಾಹಕರ ಸಹಕಾರ ಅತ್ಯಗತ್ಯ

ಕೊರಟಗೆರೆ :ರಂಗಭೂಮಿ ಕ್ಷೇತ್ರದಲ್ಲಿ ಒಬ್ಬ ಕಲಾವಿದ ಸಾಧನೆ ಮಾಡಬೇಕಾದರೆ ಕಲಾ ಪ್ರೋತ್ಸಾಹಕರ ಸಹಕಾರ ಪ್ರಮುಖವಾದದ್ದು ಎಂದು ಶ್ರೀ ಚಿರಂಜೀವಿ ಸಾಂಸ್ಕೃತಿಕ ಟ್ರಸ್ಟ್ ನ ಸಂಸ್ಥಾಪಕ ಕಾರ್ಯದರ್ಶಿ ವಿಶ್ವೇಶ್ವರಯ್ಯ ನವರು ತಿಳಿಸಿದರು.

ತುಮಕೂರು ಜಿಲ್ಲೆ ಕೊರಟಗೆರೆ ತಾಲೂಕು ಕೋಳಾಲ ಹೋಬಳಿಯ ಗಡ್ಡೋಬನಹಳ್ಳಿ ಗ್ರಾಮದಲ್ಲಿ ದಿನಾಂಕ 16/4/2026 ರಂದು ಶ್ರೀ ಚಿರಂಜೀವಿ ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಯೋಗದೊಂದಿಗೆ ಶ್ರೀ ಮಾರಮ್ಮ ದೇವಿ ಕೃಪಾಪೋಷಿತ ನಾಟಕ ಮಂಡಳಿಯಿಂದ ಆಯೋಜಿಸಲಾಗಿದ್ದ ಕುರುಕ್ಷೇತ್ರ ಅಥವಾ ಶ್ರೀ ಕೃಷ್ಣ ಸಂಧಾನ ಎಂಬ ಸುಂದರ ಪೌರಾಣಿಕ ನಾಟಕವನ್ನು ಉದ್ಘಾಟಿಸಿ ಮಾತನಾಡಿದ ಅವರು ತುಮಕೂರು ಜಿಲ್ಲೆಯಲ್ಲಿ ರಂಗಭೂಮಿಗೆ ತನ್ನದೇ ಆದ ವೈಶಿಷ್ಟ್ಯತೆ ಇದ್ದು ಈ ಕ್ಷೇತ್ರವನ್ನು ಉಳಿಸಿ ಬೆಳೆಸುವ ಕರ್ತವ್ಯ ನಮ್ಮನಿಮ್ಮೆಲ್ಲರ ಜವಾಬ್ದಾರಿ ಆಗಿರುತ್ತದೆ ರಂಗಭೂಮಿಯ ಕ್ಷೇತ್ರದಲ್ಲಿ ಒಬ್ಬ ಕಲಾವಿದ ಸಾಧನೆ ಮಾಡಬೇಕಾದರೆ ಕಲಾ ಪೋಷಕರ ಸಹಕಾರ ಅತಿ ಮುಖ್ಯವಾದದ್ದು ಕಲಾವಿದನನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ತಿಳಿಸಿದರು.

ರಂಗಭೂಮಿಯ ಕಲೆಯನ್ನು ಉಳಿಸುವ ನಿಟ್ಟಿನಲ್ಲಿ ನಾನು ಒಬ್ಬ ಸಂಗೀತ ನಿರ್ದೇಶಕನಾಗಿ ನನ್ನ ತಾಯಿಯವರ ಆಶಯದಂತೆ ಶ್ರೀ ಚಿರಂಜೀವಿ ಸಾಂಸ್ಕೃತಿಕ ಟ್ರಸ್ಟ್ ನ್ನು ಸ್ಥಾಪಿಸುವ ಮೂಲಕ ರಾಜ್ಯದ ಹಲವಾರು ಗ್ರಾಮೀಣ ಭಾಗದಲ್ಲಿ ಪೌರಾಣಿಕ ನಾಟಕಗಳನ್ನು ನಮ್ಮ ಟ್ರಸ್ಟ್ ನ ಅಡಿಯಲ್ಲಿ ಪ್ರದರ್ಶನ ಮಾಡುತ್ತಾ ರಂಗಭೂಮಿಯ ಕಲೆಗೆ ಹೆಚ್ಚು ಹೊತ್ತು ನೀಡುತ್ತಿರುವುದು ನಮ್ಮ ಕುಟುಂಬದ ಸದಸ್ಯರಿಗೆ ಮತ್ತು ನನಗೆ ಸಂತಸ ತಂದಿದೆ ಇನ್ನೂ ಹೆಚ್ಚು ಹೆಚ್ಚು ರಂಗಭೂಮಿಯ ಕಲೆಯನ್ನು ಪ್ರೋತ್ಸಾಹಿಸಲು ನನಗೆ ನಿಮ್ಮೆಲ್ಲರ ಸಹಕಾರ ಅತ್ಯಗತ್ಯವಾಗಿದೆ ಎಂದು



ಕಲಾಪೋಷಕರಲ್ಲಿ ಮತ್ತು ಕಲಾಭಿಮಾನಿಗಳಲ್ಲಿ ಮನವಿ ಮಾಡಿದರು.

ಪೌರಾಣಿಕ ನಾಟಕದ ದಿವ್ಯ ಸಾನಿಧ್ಯವನ್ನು ವಹಿಸಿದ್ದ ಎಲೆ ರಾಂಪುರದ ಕುಂಚಿಟಿಗರ ಮಹಾಸಂಸ್ಥಾನ ಮಠದ ಡಾ, ಶ್ರೀ ಶ್ರೀ ಶ್ರೀ ಹನುಮಂತನಾಥ ಸ್ವಾಮೀಜಿಯವರು ಆಶೀರ್ವಚನ ನೀಡುತ್ತಾ ತುಮಕೂರು ಜಿಲ್ಲೆ ಕಲೆಯ ತವರೂರು ರಂಗಭೂಮಿಯ ಭೀಷ್ಮ ಡಾ. ಗುಬ್ಬಿ ವೀರಣ್ಣನವರು ಜನಿಸಿದ ಈ ಕಲ್ಪತರು ನಾಡಿನಲ್ಲಿ ಹೆಚ್ಚು ಹೆಚ್ಚು ರಂಗಭೂಮಿಯ ಪೌರಾಣಿಕ ನಾಟಕಗಳನ್ನು ಪ್ರದರ್ಶನ ಮಾಡುತ್ತಿದ್ದು ಪ್ರೇಕ್ಷಕರು ಈ ನಾಟಕಗಳನ್ನು ನೋಡುವ ಮೂಲಕ ತಮ್ಮ ನಿಜ ಜೀವನದಲ್ಲಿ ಒಳ್ಳೆಯ ವಿಚಾರಗಳನ್ನು ಅಳವಡಿಸಿಕೊಳ್ಳುವ ಮೂಲಕ ದ್ವೇಷ ಅಸೂಯೆಯನ್ನು ದೂರ ಮಾಡಿ ನೆಮ್ಮದಿಯ ಬದುಕು ಕಟ್ಟಿಕೊಳ್ಳಬೇಕು ಆಗ ಮಾತ್ರ ಈ ನಾಟಕಗಳ ಪ್ರದರ್ಶನಕ್ಕೆ ಅರ್ಥ ಕಲ್ಪಿಸಿದಂತಾಗುತ್ತದೆ ಎಂದು ನೆರೆದಿದ್ದ ಸಾವಿರಾರು ಕಲಾಪ್ರೇಕ್ಷಕರಿಗೆ ಆಶೀರ್ವಚನ ನೀಡಿದರು.

ಕರ್ನಾಟಕ ಸಾಂಸ್ಕೃತಿಕ ಸಂಘಟನೆಗಳ ರಾಜ್ಯ ಮಹಾ ಒಕ್ಕೂಟದ ರಾಜ್ಯಾಧ್ಯಕ್ಷ ವೀರೇಶ್ ಪ್ರಸಾದ್ ಮಾತನಾಡಿ ಕರ್ನಾಟಕ ರಾಜ್ಯದಲ್ಲಿ ಸಾಕಷ್ಟು ಕಲಾವಿದರು ಕಲೆಯನ್ನೆ ನಂಬಿ ಜೀವನ ಸಾಗಿಸುತ್ತಿದ್ದಾರೆ ಅದೆಷ್ಟೋ ಕಲಾವಿದರ ಬದುಕು ಕಷ್ಟಕರವಾಗಿದೆ ರಾಜ್ಯ ಸರ್ಕಾರ ಕಲಾವಿದರ ಬದುಕಿಗೆ ಶಾಶ್ವತ ನೆಲೆಯನ್ನು ನೀಡುವಂತೆ ಯೋಜನೆಗಳನ್ನು ರೂಪಿಸುವತ್ತ ಚಿಂತನೆಗಳನ್ನು ಮಾಡಬೇಕಾಗಿದೆ ರಾಜ್ಯದ ಕಲಾವಿದರು ಸರ್ಕಾರದ ಯೋಜನೆಗಳನ್ನು ಹೇಚ್ಚು ಹೇಚ್ಚು ಪಡೆಯಬೇಕೆಂದರೆ ನಾವು ಒಗ್ಗಟ್ಟಿನಿಂದ ಸಂಘಟಿತರಾಗಬೇಕಾಗಿದೆ ಶ್ರೀ ಚಿರಂಜೀವಿ ಸಾಂಸ್ಕೃತಿಕ ಟ್ರಸ್ಟ್ ರಾಜ್ಯದ್ಯಂತ ಉತ್ತಮ ಕಾರ್ಯಗಳನ್ನು ಮಾಡುತ್ತ ಬರುತ್ತಿದೆ ಕಲಾವಿದರ ಉಳಿವಿಗಾಗಿ ಸಾಕಷ್ಟು ಸರ್ಕಾರದ ಗಮನ ಸೆಳೆಯುವಂತಹ ಕಾರ್ಯಕ್ರಮಗಳನ್ನು ಮಾಡುತ್ತ ಬರುತಿದೆ ಹೆಸರಾಂತ ಸಂಗೀತ ನಿರ್ದೇಶಕರು ಹಾಗೂ ಶ್ರೀ ಚಿರಂಜೀವಿ ಸಾಂಸ್ಕೃತಿಕ ಟ್ರಸ್ಟ್ ನ ಸಂಸ್ಥಾಪಕ ಕಾರ್ಯದರ್ಶಿಗಳು ಆದಂತಹ ವಿಶ್ವೇಶ್ವರಯ್ಯನವರು ರಂಗಭೂಮಿಯ ಕಲೆಗೆ ಹೆಚ್ಚಿನ ಮಹತ್ವ ನೀಡುವ ಮೂಲಕ ಕಲೆಯನ್ನು ಉಳಿಸಿ ಬೆಳೆಸುವಂತಹ ಕೆಲಸ ಮಾಡುತ್ತಿರುವುದು ನಿಜಕ್ಕೂ ಶ್ಲಾಘನೀಯವಾದದ್ದು ಆದ್ದರಿಂದ ನಾವುಗಳು ಎಂದೆಂದಿಗೂ ಅವರ ಉತ್ತಮ ಕಾರ್ಯಗಳಿಗೆ ಸಹಕಾರ ನೀಡುವ ಮೂಲಕ ಅವರ ಈ ಕಲಾ ಸೇವೆಗೆ ಪ್ರೋತ್ಸಾಹ ನೀಡುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀ ಗೊರವನಹಳ್ಳಿ ಮಹಾಲಕ್ಷ್ಮಿ ಸಂಸ್ಥಾನ ಶ್ರೀ ಕಮಲಮ್ಮನವರ ಮೊಮ್ಮಗಳಾದ ಶ್ರೀ ಲಕ್ಷ್ಮಿ,

ಸುಬ್ರಮಣ್ಯ ಸ್ವಾಮಿ, ಹಿರಿಯ ಕಲಾ ಪೋಷಕರು ಹಾಗೂ ಸಂಗೀತ ನಿರ್ದೇಶಕರಾದ ವಿಶ್ವೇಶ್ವರಯ್ಯನವರ ತಾಯಿಯವರಾದ ಕಾಮಕ್ಕ, ರಂಗಸ್ವಾಮಯ್ಯ, ಚಂದ್ರಶೇಖರ ಆಚಾರ್, ಸಾಹಿತಿಗಳಾದ ದುಗ್ಗನಹಳ್ಳಿ ಸಿದ್ದೇಶ್, ಮಹಾಲಕ್ಷ್ಮಿ ವಿದ್ಯಾ ಸಂಸ್ಥೆಯ ಶಿಕ್ಷಕರಾದ ಸೋಮಶೇಖರಯ್ಯ ಮುಂತಾದವರು ಉಪಸ್ಥಿತರಿದ್ದರು

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

## SP NEWS ಸಣ್ ಸುದ್ದಿ



ತುಮಕೂರು ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಇಕ್ಬಾಲ್ ಅಹಮದ್ ಅವರನ್ನು ಕಾಂಗ್ರೆಸ್ ಮುಖಂಡ, ಸಮಾಜ ಸೇವಕ ಹಾಗೂ ಆರ್ಯವೈಶ್ಯ ಮುಖಂಡ ನಟರಾಜ ಅಭಿನಂದಿಸಿದರು. ಈ ವೇಳೆ ಕಾಂಗ್ರೆಸ್ ಮುಖಂಡರಾದ ಶಿವಾಜಿ ಹಾಗೂ ಅಜಂತಾ ಅಬ್ದುಲ್ ಇದ್ದರು.



ತುಮಕೂರಿನ ಎಂ.ಜಿ. ರಸ್ತೆಯಲ್ಲಿರುವ ಟಾಯ್ಸ್ ಲ್ಯಾಂಡ್ ಅಂಗಡಿಯಲ್ಲಿ ಬಿರು ಬೇಸಿಗೆ ಹಿನ್ನೆಲೆಯಲ್ಲಿ ಪ್ರತಿನಿತ್ಯ ಮಧ್ಯಾಹ್ನ 12 ಗಂಟೆಯಿಂದ 3 ಗಂಟೆವರೆಗೆ ಉಚಿತವಾಗಿ ಸಾರ್ವಜನಿಕರಿಗೆ ಮಜ್ಜಿಗೆ ವಿತರಣೆ ಮಾಡಲಾಗುತ್ತಿದೆ. ಎನ್.ಎಸ್. ಬಾಲಾಜಿ, ನಾಗಣಿ, ಮೇಘರಾಜ್, ವೇಣುಗೋಪಾಲ್, ತುಕಾರಾಂ, ನಟರಾಜ್ ಚಿತ್ರದಲ್ಲಿದ್ದಾರೆ.



ಕುಣಿಗಲ್ ತಾಲ್ಲೂಕಿನ ಹುಲಿಯೂರುದುರ್ಗ ದೀಪಾಂಬುದಿ ಶ್ರೀ ಕಾಳಿಕಾಂಬ ದೇವಾಲಯ ಜೀರ್ಣೋದ್ಧಾರದ ಅಂಗವಾಗಿ ಮಂಗಳವಾರ ನಡೆದ ಧಾರ್ಮಿಕ ಕಾರ್ಯ ಕ್ರಮದಲ್ಲಿ ದೇವಾಲಯ ಸಮಿತಿ ಸಹ ಕಾರ್ಯ ದರ್ಶಿ ಹೆಬ್ಬೂರು ನಾಗರಾಜಚಾರ್, ವಿಶ್ವ ಕರ್ಮ ಅಭಿವೃದ್ಧಿ ನಿಗಮದ ಜಿಲ್ಲಾ ನಿರ್ದೇಶಕ ಟಿ.ಸಿ.ಡಮರುಗೇಶ್, ಕಾಳಿಕಾಂಬ ಸಹಕಾರಿ ಮಾಜಿ ಅಧ್ಯಕ್ಷ ಕೆ. ವಿ. ಗೋವರ್ಧನಾಚಾರ್, ಋತ್ವಿಜರು ಹಾಗೂ ಭಕ್ತರು ಪಾಲ್ಗೊಂಡರು.

## ಕಾಲೇಜು ಫ್ಲೆಕ್ಸ್ ಹರಿದ ಕಿಡಿಗೇಡಿಗಳು



: ಹುಳಿಯಾರು ಸಮೀಪದ ಹಂದನಕೆರೆಯ ಜಿ.ವಿ.ಪಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾಥಿಗಳಿಗೆ ಅಭಿನಂದನೆ ಕೋರಿ ಪ್ರಮುಖ ರಸ್ತೆ ಪಕ್ಕದಲ್ಲಿ ಒಂದು ಫ್ಲೆಕ್ಸ್ ಹಾಕಿದ್ದರು. ಫ್ಲೆಕ್ಸ್ ಹಾಕಿರುವುದನ್ನು ಸಹಿಸದ ಕಿಡಿಗೇಡಿಗಳು ಫ್ಲೆಕ್ಸ್ ಹರಿದು ಹಾಕಿದ್ದು. ಈ ಕೃತ್ಯ ಎಸಗಿದವರ ಮೇಲೆ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ವಿದ್ಯಾಸಂಸ್ಥೆಯ ನಿರ್ದೇಶಕ ಎಸ್ ಜೆ ವಸಂತಯ್ಯ ಒತ್ತಾಯಿಸಿದ್ದು ಪೊಲೀಸರಿಗೆ ದೂರು ನೀಡಿದ್ದಾರೆ.



ತುಮಕೂರಿನ ಅಲಿ ಗರ್ಲ್ಸ್ ಪಿಯು ಕಾಲೇಜಿನಲ್ಲಿ ದ್ವಿತೀಯ ಪಿಯುಸಿಯಲ್ಲಿ ಅತ್ಯುತ್ತಮ ಫಲಿತಾಂಶ ಬಂದಿದ್ದು, ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಅಬ್ದುಲ್ ರೆಹಮಾನ್, ಕಾರ್ಯದರ್ಶಿಗಳಾದ ಹಾಜಿ ಮಿರ್ಜಾ ಅಸ್ಲಂ ಪಾಶ, ಪ್ರಾಂಶುಪಾಲ ಶೇಕ್ ಮಹಮ್ಮದ್ ಅನ್ವರ್, ಅಕಾಡೆಮಿಕ್ ಡೈರೆಕ್ಟರ್ ಜಮ್ರೂದ್ ಖಾನ್, ಎಲ್ಲಾ ಅಧ್ಯಾಪಕರು ಉಪಸ್ಥಿತರಿದ್ದರು.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

# ದೇಶದ ಪ್ರಗತಿಯಲ್ಲಿ ಮಹಿಳೆಯರ ಪಾತ್ರ ಮಹತ್ವ: ಮಹಿಳೆಯರ ರಾಜಕೀಯ ಪ್ರವೇಶ ಉತ್ತಮ ಆಡಳಿತಕ್ಕೆ ನಾಂದಿ: ಶಾಸಕ ಹೆಚ್.ವಿ.ವೆಂಕಟೇಶ್

ಪಾವಗಡ: ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ರಾಜಕೀಯಕ್ಕೆ ಬಂದರೆ ಅವರು ಇಡೀ ಸಮಾಜದ ದಿಕ್ಕನ್ನೇ ಬದಲಿಸಬಲ್ಲರು ಎಂಬುದನ್ನು ಇತಿಹಾಸವೇ ಸಾಬೀತುಪಡಿಸಿದೆ ಎಂದು ಶಾಸಕ ಹೆಚ್.ವಿ.ವೆಂಕಟೇಶ್ ಹೇಳಿದರು.

ಪಟ್ಟಣದ ಎಸ್.ಎಸ್.ಕೆ ಬಯಲು ರಂಗಮಂದಿರದಲ್ಲಿ ತಾಲ್ಲೂಕು ಅಂಗನವಾಡಿ ನೌಕರರ ಸಂಘ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ತಾಲ್ಲೂಕಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಮಹಿಳೆಯರಿಗೆ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಾವಿರಾರು ವರ್ಷಗಳ ಕಾಲ 'ಮನೆಗೆ ಸೀಮಿತ' ಎಂಬ ಹಣೆಪಟ್ಟಿಯನ್ನು ಹೊಂದಿದ್ದ ಮಹಿಳೆಯರು ಪುರುಷ ಪ್ರಧಾನ ಸಮಾಜವನ್ನು ಧಿಕ್ಕರಿಸಿ ಹೊರಬಂದು ಇಂದು ದೇಶದ ರಕ್ಷಣೆ, ಹಣಕಾಸು ಮತ್ತು ವಿದೇಶಾಂಗ ನೀತಿಗಳನ್ನು ನಿರ್ಧರಿಸುವ, ಸರ್ಕಾರದ ಭ್ರಷ್ಟತೆಯನ್ನು ನೇರವಾಗಿ, ನಿಷ್ಠುರವಾಗಿ ಪ್ರಶ್ನಿಸುವ ಹಂತಕ್ಕೆ ಬೆಳೆದಿದ್ದಾರೆ.

ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ಶೇ.50 ರಷ್ಟು ಮಹಿಳಾ ಮೀಸಲಾತಿ ಇದ್ದು ಸಂಸತ್ತು ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿಯನ್ನು ಒದಗಿಸಲು ಪ್ರಯತ್ನಿಸುವ ಸಂವಿಧಾನ (ನೂರ ಮೂವತ್ತೊಂದನೇ ತಿದ್ದುಪಡಿ) ಮಸೂದೆ, 2026ರ ಕುರಿತು ಲೋಕಸಭೆ ತನ್ನ ಚರ್ಚೆ ಮತ್ತು ಮತದಾನವನ್ನು ಮುಂದುವರಿಸುತ್ತಿದೆ. ಸುದೀರ್ಘ ಚರ್ಚೆಯ ನಂತರ, ಕೆಳಮನೆ ಇಂದು ಸಂಜೆ ಈ ಮಸೂದೆಯ ಮೇಲೆ ಮತ ಚಲಾಯಿಸಲಿದೆ. ಈ ಕಾನೂನು ಪ್ರಕಾರ ಮುಂದಿನ ದಿನಗಳಲ್ಲಿ ಶೇ.33ರಷ್ಟು ಮಹಿಳೆಯರು ಸಂಸತ್ತು ಮತ್ತು ವಿಧಾನಸಭೆಗಳಲ್ಲಿ ಸ್ಥಾನ ಪಡೆಯಲಿದ್ದಾರೆ.



ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿರುವ ಮಹಿಳಾ ಸಾಧಕಿಯರನ್ನು ನೆನಪಿಸಿದರು.

ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡುತ್ತಿದ್ದು, ಅದರಲ್ಲಿ ಮುಖ್ಯವಾಗಿ ಶಿಕ್ಷಣಕ್ಕೆ ಮತ್ತು ಮೂಲಭೂತ ಸೌಕರ್ಯಗಳ ಕಡೆ ಮೊದಲ ಆದ್ಯತೆ ನೀಡಲಾಗುತ್ತಿದೆ.

ಪಾವಗಡ ಉತ್ಸವ: ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಹಿಳೆಯರಿಗಾಗಿ ವಿವಿಧ ರೀತಿಯ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತರಾದವರಿಗೆ ಆಕರ್ಷಕ ಬಹುಮಾನ ನೀಡಲಾಗುವುದು. ಪಾವಗಡ ಉತ್ಸವ ಹೆಸರಿನಲ್ಲಿ ಮುಂದಿನ ದಿನಗಳಲ್ಲಿ ಮಹಿಳೆಯರ ಬೃಹತ್ ಸಮಾವೇಶ ನಡೆಸಿ ಸಾಧಕ ಮಹಿಳೆಯರಿಗೆ ಪ್ರಶಸ್ತಿಗಳನ್ನು ವಿತರಣೆ ಮಾಡಲಾಗುವುದು. ಇದರ ನೇತೃತ್ವವನ್ನು ಸಿಡಿಪಿಒ ಸುನೀತಾ ಅವರು ವಹಿಸಬೇಕು ಎಂದು ತಿಳಿಸಿದರು.

ಮಹಿಳಾ ದಿನಾಚರಣೆಯಲ್ಲಿ ನೃತ್ಯ ಮಾಡಿದ ಮಹಿಳಾ ತಂಡಗಳಿಗೆ ತಲಾವೊಂದಕ್ಕೆ ಹತ್ತು ಸಾವಿರ ರೂಪಾಯಿಗಳಂತೆ ತಮ್ಮ ವೈಯಕ್ತಿಕ ಹಣದಲ್ಲಿ ಪ್ರೋತ್ಸಾಹ ಧನ ನೀಡಿದರು.

ಬಿಇಒ ರೇಣುಕಮ್ಮ ಮಾತನಾಡಿ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಮಹಿಳೆಯರಿಗೆ ವಿಶೇಷಸ್ಥಾನಮಾನವನ್ನುಅನುಚ್ಛೇದ 15ರಲ್ಲಿ ಒದಗಿಸಿಕೊಟ್ಟಿದ್ದಾರೆ. ಅದರಿಂದಲೇ ನಾವು ಎಲ್ಲಾ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡಲು ಸಾಧ್ಯವಾಗಿದೆ ಎಂದರು.

ಸಿಡಿಪಿಒ ಡಿ.ಜಿ.ಸುನೀತಾ ಮಾತನಾಡಿ, ಮಹಿಳೆಯರು ಒಂದೇ ಕ್ಷೇತ್ರಕ್ಕೆ ಮೀಸಲಿರದೇ , ರಾಷ್ಟ್ರೀಯ, ಜನಾಂಗೀಯ, ಭಾಷಾವಾರು, ಸಾಂಸ್ಕೃತಿಕ, ಆರ್ಥಿಕ ಮತ್ತು ರಾಜಕೀಯ ಕ್ಷೇತ್ರವಾಗಲಿ ಎಲ್ಲದರಲ್ಲೂ ತಮ್ಮದೇ ಆದ ಛಾಪನ್ನ ಮೂಡಿಸಿದ್ದಾರೆ. ಪುರುಷರಿಗೆ ಸಮಾನರಾಗಿ ಮಹಿಳೆಯರು ಇಂದು ಎಲ್ಲಾ ಕ್ಷೇತ್ರಗಳಲ್ಲೂ ಸ್ಪರ್ಧೆ ಮಾಡುತ್ತಾ 'ನಾರಿ ಶಕ್ತಿ' ಪ್ರದರ್ಶಿಸುತ್ತಿದ್ದಾರೆ ಎಂದರು.

ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರನ್ನು ಗುರುತಿಸಿ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾಜಿ ಪುರಸಭಾ ಅಧ್ಯಕ್ಷರಾದ ಜಿ.ಸುರೇಶ್ ಬಾಬು ಪಿ.ಹೆಚ್.ರಾಜೇಶ್, ತಾ.ಪಂ.ಮಾಜಿ ಉಪಾಧ್ಯಕ್ಷ ಐ.ಜಿ.ನಾಗರಾಜು, ಗುತ್ತಿಗೆದಾರ ಹನುಮಂತರಾಯಪ್ಪ, ಎಸಿಡಿಪಿಒ ಸೈಯದ್ ರಕೀಬ್ ಉಲ್ಲಾ, ತಾಲ್ಲೂಕು ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಸುಮಾ ಅನಿಲ್, ಉಷಾರಾಣಿ, ಅಂಗನವಾಡಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷೆ ಸುಶೀಲಮ್ಮ, ಶಿವಗಂಗಮ್ಮ, ಆಹಾರ ಇಲಾಖೆಯ ಶಶಿಕಲಾ, ಪೊಲೀಸ್ ವೃತ್ತ ನಿರೀಕ್ಷಕರಾದ ಕೆ.ಸುರೇಶ್, ಸರಸ್ವತಮ್ಮ, ಸರೋಜಮ್ಮ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಹಾಜರಿದ್ದರು.

# ಮಕ್ಕಳು ಅಂಕಗಳಿಸುವ ಯಂತ್ರಗಳಾಗದೆ ಸುಸಂಸ್ಕೃತರಾಗಬೇಕು–ಡಾ.ಹನುಮಂತನಾಥ ಸ್ವಾಮೀಜಿ

ಕೊರಟಗೆರೆ ;– ಮಕ್ಕಳು ಕೇವಲ ಅಂಕ ಗಳಿಸುವ ಯಂತ್ರಗಳಾಗದೆ ಸಮಾಜದಲ್ಲಿ ಸುಸಂಸ್ಕೃತ ವ್ಯಕ್ತಿಗಳಾಗಿ ಬೆಳೆಯಬೇಕು ಎಂದು ಏಲೆರಾಂಪುರ ಕುಂಚಿಟಿಗ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ಡಾ.ಹನುಮಂತನಾಥ ಸ್ವಾಮೀಜಿ ತಿಳಿಸಿದರು.

ಅವರು ಕೊರಟಗೆರೆ ತಾಲೂಕಿನ ಎಲೆರಾಂಪುರದ ಕುಂಚಿಟಿಗ ಮಹಾಸಂಸ್ಥಾನ ಮಠದ ಕುಂಚಶ್ರೀ ಸಮುದಯ ಭವನದಲ್ಲಿ ಆಯೋಜಿಸಿದ್ದ 5ನೇ ವರ್ಷದ ಸಂಸ್ಕಾರ ಶಿಬಿರದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಗಳಿಸದಿದ್ದರೂ ಪರವಾಗಿಲ್ಲ ಆದರೆ ತಂದೆ–ತಾಯಿ ಹಾಗೂ ಗುರುಹಿರಿಯರನ್ನುಗೌರವಿಸುವ ಸಂಸ್ಕಾರವನ್ನು ಮಕ್ಕಳು ತಮ್ಮಜೀವನದಲ್ಲಿ ಆಳವಡಿಸಿಕೊಳ್ಳಬೇಕು, ಮೌಲ್ಯಾಧಾರಿತ ಶಿಕ್ಷಣವೇ ಜೀವನದಲ್ಲಿ ಹೆಚ್ಚು ಪ್ರಾಮುಖ್ಯತೆಯನ್ನು ಹೊಂದಿದೆ ಎಂದರು.

ಮೇಲು ಕೋಟೆಯ ಭಗವತ್ ರಾಮಾನುಜ ಸಂಶೋಧನಾ ಸಂಸ್ಥೆಯ ಕುಲ ಸಚಿವ ಸಿ.ಕುಮಾರ್ ಮಾತನಾಡಿ ಹಿಂದೂ ಸಮಾಜದಲ್ಲಿ ಶಿಕ್ಷಣವಂತರ ಸಂಖ್ಯೆ ಕಡಿಮೆಯಾಗುತ್ತಿರುವುದು ಅತಂಕಕಾರಿ ಬೆಳವಣಿಗೆಯಾಗಿದೆ, ಕುಂಚಿಟಿಗ ಮಹಾಸಂಸ್ಥಾನ ಮಠವು ಸನಾತನ



ಪರಂಪರೆಯನ್ನು ಉಳಿಸುವ ಉದ್ದೇಶದಿಂದ ಸಂಸ್ಕಾರ ಶಿಬಿರ ಅಯೋಜಿಸಿರುವುದು ರಾಜ್ಯಕ್ಕೆ ಮಾದರಿಯಾಗಿದ್ದು ಇನ್ನಿತರ ಮಠ ಮಾನ್ಯಗಳು ಇಂತಹ ಶಿಬಿರಗಳನ್ನು ಆಯೋಜಿಸುವ ಮೂಲಕ ಸಮಾಜದಲ್ಲಿ ಸನಾತನ ಪರಂಪರೆ ಉಳಿಸುವ ಪ್ರಯತ್ನ ಮಾಡಬೇಕು ಎಂದರು.

ಕುಂಚಿಟಿಗ ಮಠದ ಧಾನಿಗಳಾದ ಡಾ.ನವೀನ್ ದೇವರಾಜಯ್ಯ ಮಾತನಾಡಿ ವಿದ್ಯೆ ಕೇವಲ ಜ್ಞಾನವನ್ನಷ್ಟೇ ಅಲ್ಲ, ಜೀವನೋಪಾಯದ ಮಾರ್ಗವನ್ನೂ ನೀಡುತ್ತದೆ, ವಿದ್ಯಾದಾನಕ್ಕಿಂತ ಶ್ರೇಷ್ಠಧಾನ ಮತ್ತೊಂದಿಲ್ಲ ನಮ್ಮ ದೇಶ, ಭಾಷೆ ಹಾಗೂ ಸಂಸ್ಕೃತಿಯನ್ನು ಪ್ರೀತಿಸುವ ಮನೋಭಾವ ಬೇಳೆಸಿಕೊಳ್ಳಬೇಕು ಎಂದರು.

ತಹಶೀಲ್ದಾರ್ ಕೆ.ಮಂಜುನಾಥ್ ಮಾತನಾಡಿ ಮಕ್ಕಳು ಮೊದಲು ಮನಸ್ಸಿನ ನಿಯಂತ್ರಣ ಕಲಿಯಬೇಕು , ಚಂಚಲತೆಯಿಂದ ದೂರವಾಗಿ ಶಿಬಿರದ ಸಂಪೂರ್ಣ ಪ್ರಯೋಜನ ಪಡೆದುಕೊಳ್ಳಬೇಕು, ವಿದ್ಯೆ ವಿನಯವನ್ನು ಕಲಿಸುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗೃಹ ಸಚಿವರ ವಿಶೇಷ ಅಧಿಕಾರಿ ಡಾ.ಕೆ.ನಾಗಣ್ಣ, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಅನಂತರಾಜು, ಸದ್ವಿದ್ಯಾ ಸಂಸ್ಥಾಪಕ ಶಾಲೆಯ ಆಡಳಿತಾಧಿಕಾರಿ ಡಾ.ನಂಜುಂಡಯ್ಯ, ಸಂಸ್ಕಾರ ಶಿಬಿರದ ಸಂಚಾಲಕ ಡಾ.ಕುಮಾರಸ್ವಾಮಿ, ಮುಖಂಡರುಗಳಾದ ನರೇಂದ್ರ ಬಾಅಬು, ನೇತಾಜಿ ಶ್ರೀಧರ, ಬೈಯಪ್ಪನಹಳ್ಳಿ ನಾಗರಾಜು, ಲೋಕೇಶ್, ಡಾ,ಭೋಗಣ್ಣ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಯಲ್ಲಿ ಬೇಸಿಗೆ ಶಿಬಿರ



ಮಧುಗಿರಿ ..ವಿದ್ಯಾರ್ಥಿಗಳು ಹೆಚ್ಚು ಪ್ರಶ್ನಿಸುವುದನ್ನು ಕಲಿತಷ್ಟು ಅವರಲ್ಲಿ ಸತ್ಯಾನ್ವೇಷಣ ಗುಣಗಳು ಬೆಳೆದು ವಾಸ್ತವ ಬದುಕನ್ನು ಕಟ್ಟಿಕೊಳ್ಳಲು ಅನುಕೂಲವಾಗುತ್ತದೆ ಎಂದು ಶಿಕ್ಷಕ ಶಾಂತಕುಮಾರ್ ತಿಳಿಸಿದ್ದಾರೆ ತಾಲೂಕಿನ ಕೊಡಿಗೇನಹಳ್ಳಿ ಹೋಬಳಿ ಗುಟ್ಟೆ ಸರ್ಕಾರಿ ಶಾಲೆಯಲ್ಲಿ ನಡೆದ ಮಕ್ಕಳ ಬೇಸಿಗೆ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು

ನೀರಿನಲ್ಲಿ ದೀಪ ಹಚ್ಚುವುದು, ಒದ್ದೆ ಮಣ್ಣಿನಲ್ಲಿ ಬೆಂಕಿ ಉರಿಯುವುದು, ಬರಿ ಕೈಯ್ಯಲ್ಲಿ ಕರ್ಪೂರ ಹಚ್ಚುವುದು, ತೆಂಗಿನ ಕಾಯಲ್ಲಿ ಬೆಂಕಿ ಬರುವುದು ಮೊದಲಾದ ಪವಾಡ ಗಳನ್ನು ಬಯಲು ಮಾಡಿ ವೈಜ್ಞಾನಿಕ ಕಾರಣಗಳನ್ನು ತಿಳಿಸಿದರು.

ಮುಖ್ಯ ಶಿಕ್ಷಕಿ ನಳಿನಾಕ್ಷಿ ಮಾತನಾಡಿ 5 ದಿನಗಳ ಬೇಸಿಗೆ ಶಿಬಿರಕ್ಕೆ ಶಾಲೆಯ ಹಳೆಯ ವಿದ್ಯಾರ್ಥಿಗಳ ತಂಡ ಅನ್ನ ದಾಸೋಹದ ಜೊತೆಗೆ ಕಲಿಕಾ ಸಾಮಗ್ರಿಗಳನ್ನು ಕೊಡಿಸಿದ್ದಾರೆ. ಈ ಐದು ದಿನಗಳು ಕೌಶಲ್ಯಯುತ ಕಲಿಕೆಯೊಂದಿಗೆ ಒಳಾಂಗಣ ಮತ್ತು ಹೊರಾಂಗಣ ಆಟಗಳಲ್ಲಿ ಮಕ್ಕಳು ಸಂಭ್ರಮಿಸಿದರು ಎಂದು ತಿಳಿಸಿದರು.

ಶಿಕ್ಷಣ ಸಂಯೋಜಕಿ ಯಶೋದಮ್ಮ, ಎಸ್ ಡಿ ಎಂ ಸಿ ಅಧ್ಯಕ್ಷ ನಾಗೇಂದ್ರ, ಉಪಾಧ್ಯಕ್ಷ ನರಸಿಂಹಮೂರ್ತಿ, ಸದಸ್ಯರು, ಗ್ರಾಮಸ್ಥರು, ಶಿಕ್ಷಕರಾದ ನಂಜಾರೆಡ್ಡಿ ಮತ್ತು ಜ್ಯೋತಿ ಭಾಗವಹಿಸಿದ್ದರು.

# ಮಳೆ–ಸರ್ಕಾರ –ಮಧ್ಯವರ್ತಿಗಳ ತ್ರಿಕೋನ ಜೂಜಾಟದಲ್ಲಿ ರೈತ ಹೈರಾಣು

ತುಮಕೂರು: ದೇಶದ ಬೆನ್ನೆಲುಬಾದ ರೈತ ಇಂದು ಮಳೆ, ಸರ್ಕಾರದ ಮಂದಗತಿಯ ನೀತಿ ಮತ್ತು ಮಧ್ಯವರ್ತಿಗಳ ದರೋಡೆಯಿಂದಾಗಿ ಬೀದಿಗೆ ಬರುವಂತಾಗಿದೆ ಎಂದು ಹಾವೇರಿ ವಿಶ್ವವಿದ್ಯಾನಿಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ. ಎಸ್. ಟಿ. ಬಾಗಲಕೋಟಿ ಅವರು ಕಳವಳ ವ್ಯಕ್ತಪಡಿಸಿದರು.

ತುಮಕೂರು ವಿಶ್ವವಿದ್ಯಾನಿಲಯದ ಪ್ರೊ. ಎಂ.ಡಿ. ನಂಜುಂಡಸ್ವಾಮಿ ಅಧ್ಯಯನ ಪೀಠ ಹಾಗೂ ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಸಂಯುಕ್ತಾಶ್ರಯದಲ್ಲಿ ಏ. 17 ಶುಕ್ರವಾರದಂದು ಆಯೋಜಿಸಿದ್ದ 'ಕರ್ನಾಟಕ ಕೃಷಿಯ ಪ್ರಸ್ತುತ ಸಮಸ್ಯೆಗಳು' ಎಂಬ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕೃಷಿಯಲ್ಲಿ ಆದಾಯದ ಅಸಮಾನತೆ ಹೆಚ್ಚಾಗಿದ್ದು, ರಾಜ್ಯದಲ್ಲಿ ರೈತರ ಭೂ ಹಿಡುವಳಿಯ ಗಾತ್ರ ಸರಾಸರಿ 1.5 ಎಕರೆಗೆ ಕುಸಿದಿದೆ. ಇದರಿಂದಾಗಿ ಉತ್ಪಾದನೆ ಮತ್ತು ಆದಾಯ ಎರಡೂ ಕಡಿಮೆಯಾಗಿದ್ದು, ಕೃಷಿ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ನಗರಗಳತ್ತ ವಲಸೆ ಹೋಗುತ್ತಿದ್ದಾರೆ ಎಂದು ಅವರು ವಿವರಿಸಿದರು.

ವರುಣನ ಜೂಜಾಟ, ಪ್ರವಾಹ ಹಾಗೂ ಬರಗಾಲದಂತಹ ಅನಿಶ್ಚಿತತೆಗಳಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಿರಿಧಾನ್ಯ ಹಾಗೂ ವಾಣಿಜ್ಯ ಬೆಳೆಗಳಿಗೆ ಮಾರುಕಟ್ಟೆಯಲ್ಲಿ ಸರಿಯಾದ ಬೆಲೆ ಸಿಗುತ್ತಿಲ್ಲ. ಸರ್ಕಾರವು ಸಂಸ್ಕರಣಾ ಘಟಕಗಳು ಮತ್ತು ಸಂಗ್ರಹಣಾ ಕೇಂದ್ರಗಳನ್ನು ಸ್ಥಾಪಿಸುವಲ್ಲಿ ವಿಫಲವಾಗಿದೆ. ನಬಾರ್ಡ್ ಅಂಕಿ–ಅಂಶಗಳ ಪ್ರಕಾರ 14,700 ಸಹಕಾರಿ ಸಂಘಗಳು ದಿವಾಳಿಯಾಗಿರುವುದು ರೈತರ ಪಾಲಿಗೆ ಆತಂಕಕಾರಿ ವಿಷಯವಾಗಿದೆ. ಆದ್ದರಿಂದ ಸರ್ಕಾರವು ಹೋಬಳಿ ಮಟ್ಟದಲ್ಲಿ ರೈತರ ಸಂತೆಗಳು ಹಾಗೂ ಮಾರುಕಟ್ಟೆ ವ್ಯವಸ್ಥೆಯನ್ನು ಬಲಪಡಿಸಬೇಕಿದೆ ಎಂದು ಒತ್ತಿ ಹೇಳಿದರು.

ತುಮಕೂರು ವಿವಿ ಪರೀಕ್ಷಾಂಗ ಕುಲಸಚಿವರಾದ ಪ್ರೊ. ಹೆಚ್. ಎಸ್. ಮೋಹನ್ ಅವರು ಮಾತನಾಡಿ, ಜಾಗತೀಕರಣದ ನಂತರ ಕೃಷಿಯ ಮೇಲಿನ ಕಾಳಜಿ ಕಡಿಮೆಯಾಗುತ್ತಿದೆ. ಕೆಲವು ವರ್ಷಗಳ



ಹಿಂದೆ ಶೇ. 50ಕ್ಕಿಂತ ಹೆಚ್ಚಿದ್ದ ಯುವ ಕೃಷಿಕರ ಪಾಲು ಇಂದು ಗಣನೀಯವಾಗಿ ಇಳಿಕೆಯಾಗಿದೆ. ಹವಾಮಾನ ವೈಪರೀತ್ಯ ಹಾಗೂ ಸಾಲದ ಬಾಧೆಯಿಂದಾಗಿ ಯುವಜನತೆ ಕೃಷಿಯಿಂದ ವಿಮುಖರಾಗುತ್ತಿದ್ದು, ತಿಂಗಳ ಸಂಬಳದ ಭದ್ರತೆ ನೀಡುವ ಉದ್ಯೋಗಗಳತ್ತ ಆಕರ್ಷಿತರಾಗುತ್ತಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಪ್ರೊ. ಎಂ.ಡಿ. ನಂಜುಂಡಸ್ವಾಮಿ ಅಧ್ಯಯನ ಪೀಠದ ನಿರ್ದೇಶಕರಾದ ಡಾ. ಮುನಿರಾಜು ಎಂ. ಸ್ವಾಗತಿಸಿದರು, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಅಧ್ಯಕ್ಷರಾದ ಪ್ರೊ. ರವೀಂದ್ರ ಕುಮಾರ್ ವಂದಿಸಿದರು ಹಾಗೂ ಸಹಪ್ರಾಧ್ಯಾಪಕ ಡಾ.ನೀಲಕಂಠ ಎನ್. ಟಿ. ಅವರು ನಿರೂಪಣೆ ಮಾಡಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಚಿಂಪುಗಾನಹಳ್ಳಿಯಲ್ಲಿ ಕುರುಕ್ಷೇತ್ರ ನಾಟಕ ಪ್ರದರ್ಶನ




ತುಮಕೂರು:– ಜಿಲ್ಲೆಯ ಕೊರಟಗೆರೆ ತಾಲೂಕಿನ ಹೊಳವನಹಳ್ಳಿ ಹೋಬಳಿ ವ್ಯಾಪ್ತಿಯ ಚಿಂಪುಗಾನಹಳ್ಳಿ ಗ್ರಾಮದಲ್ಲಿ ಇದೇ ಭಾನುವಾರದಂದು ಶ್ರೀ ಮುತ್ಯಾಲಮ್ಮ ದೇವಿ ಕೃಪಾ ಪೋಷಿತ ನಾಟಕ ಮಂಡಳಿ ವತಿಯಿಂದ ಕುರುಕ್ಷೇತ್ರ ಅಥವಾ ಭಗವದ್ಗೀತೆ ನಾಟಕ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ನಾಟಕ ಮಂಡಳಿ ತಿಳಿಸಿದೆ. ರಾಜ್ಯದ ಮಾನ್ಯ ಗೃಹ ಮಂತ್ರಿಗಳು ಹಾಗೂ ಕೊರಟಗೆರೆ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಡಾ.ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ನಾಟಕ ಪ್ರದರ್ಶನ ಜರುಗಲಿದ್ದು ಮಾಜಿ ಶಾಸಕರಾದ ಸುಧಾಕರ್ ಲಾಲ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ಪಿಎನ್ ಕೃಷ್ಣಮೂರ್ತಿ, ಬಿ.ಹೆಚ್.ಅನಿಲ್ ಕುಮಾರ್ ಸೇರಿದಂತೆ ಇನ್ನಿತರ ಗಣ್ಯರು ನಾಟಕ ಉದ್ಘಾಟಿಸಲಿದ್ದು ತುಮಕೂರಿನ ಬಸವೇಶ್ವರ ಡ್ರಾಮಾ ಸೀನರಿ ಅವರ ಜಗಮಗಿಸುವ ವಿದ್ಯುತ್ ದೀಪಾಲಂಕಾರದ ಭವ್ಯರಂಗ ಸಜ್ಜಿಕೆಯಲ್ಲಿ ಬೆಳ್ಳಿ ಕಿರೀಟ ಪ್ರಶಸ್ತಿ ಪುರಸ್ಕೃತರಾದ ಎಂ.ಹೆಚ್ ಗಣೇಶ ಅವರ ಸಂಗೀತ ನಿರ್ದೇಶನದಲ್ಲಿ, ಚಿಂಪುಗಾನಹಳ್ಳಿ ಗ್ರಾಮದ ನುರಿತ ಕಲಾವಿದರಿಂದ ಭಾನುವಾರ ರಾತ್ರಿ 8 ಗಂಟೆಗೆ ನಾಟಕ ಪ್ರದರ್ಶನ ಪ್ರಾರಂಭಗೊಳ್ಳಲಿದ್ದು ರಂಗಭೂಮಿ ಕಲಾವಿದರು, ಕಲಾ ಪ್ರೋತ್ಸಾಹಕರು ನಾಟಕವನ್ನು ಯಶಸ್ವಿಗೊಳಿಸಬೇಕು ಎಂದು ನಾಟಕ ಮಂಡಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

# ಆರೋಗ್ಯದ ವಿಚಾರದಲ್ಲಿ ಮೌಢ್ಯ ನಂಬದೇ ವೈಜ್ಞಾನಿಕ ಪರಿಹಾರ ಕಂಡುಕೊಳ್ಳಿ

ತಿಪಟೂರು : ವಿದ್ಯಾರ್ಥಿಗಳು ಆರೋಗ್ಯದ ವಿಚಾರದಲ್ಲಿ ಯಾವುದೇ ಮೌಢ್ಯಗಳನ್ನು ನಂಬದೇ ವೈಜ್ಞಾನಿಕವಾಗಿ ಪರಿಹಾರ ಕಂಡುಕೊಳ್ಳಬೇಕು. ಜನರ ವೈಜ್ಞಾನಿಕ ಆಲೋಚನೆ ಹೆಚ್ಚಿಸುವ ನಿಟ್ಟಿನಲ್ಲಿ ಈ ಬಾರಿಯ ವಿಶ್ವ ಆರೋಗ್ಯ ದಿನವನ್ನು ಆರೋಗ್ಯಕ್ಕಾಗಿ ಒಂದಾಗೋಣ, ವಿಜ್ಞಾನವನ್ನು ನಂಬೋಣ ಎಂಬ ಧ್ಯೇಯ ವಾಕ್ಯದೊಂದಿಗೆ ಆಚರಿಸಲಾಗುತ್ತಿದೆ ಎಂದು ತಿಪಟೂರು ಸಾರ್ವಜನಿಕ ಆಸ್ಪತ್ರೆಯ ಕೌನ್ಸಿಲರ್ ಉಮೇಶ್.ಟಿ.ಎಸ್ ತಿಳಿಸಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎಪಿಜೆ ಅಬ್ದುಲ್ ಕಲಾಂ ಸಭಾಂಗಣದಲ್ಲಿ ಶುಕ್ರವಾರ ಐಕ್ಯೂಎಸಿ ಸಹಯೋಗದೊಂದಿಗೆ ನಡೆದ ವಿಶ್ವ ಆರೋಗ್ಯ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿಶ್ವ ಆರೋಗ್ಯ ಸಂಸ್ಥೆಯು ಮೊದಲ ವಿಶ್ವ ಆರೋಗ್ಯ ದಿನದ ಪ್ರಯುಕ್ತವೇ ತನ್ನ ಧ್ಯೇಯ ವಾಕ್ಯ ಎಲ್ಲರಿಗಾಗಿ ಆರೋಗ್ಯ ಎಂದು ಹೇಳುವುದರ ಮೂಲಕ ತನ್ನ ಗುರಿ ತಿಳಿಸಿತ್ತು. ಅದೇ ರೀತಿಯಲ್ಲಿ ಪ್ರತಿ ವರ್ಷ ಅದನ್ನು ಸಾಕಾರಗೊಳಿಸುವಲ್ಲಿ ಕಾರ್ಯನಿರತವಾಗಿದೆ. ವಿದ್ಯಾರ್ಥಿಗಳಾದ ನೀವುಗಳು ನಿಮ್ಮ



ದೈಹಿಕ ಮತ್ತು ಮಾನಸಿಕ ಆರೋಗ್ಯದ ಕಡೆ ಗಮನಕೊಡಬೇಕು. ನಿಮ್ಮ ಆರೋಗ್ಯ ನಿಮ್ಮ ಕೈಯಲ್ಲಿದೆ ಎಂದರು.

ಪ್ರಾಂಶುಪಾಲರಾದ ಡಾ.ಶಶಿಕುಮಾರ್. ಎಚ್.ಸಿ ಮಾತನಾಡಿ, ವಿದ್ಯಾರ್ಥಿಗಳಾದ ನೀವು ದಡ್ಡರಲ್ಲ, ಆಲಸ್ಯವಹಿಸುತ್ತಿದ್ದಿರಷ್ಟೇ. ನಿಮ್ಮಲ್ಲಿನ ಆಲಸ್ಯ ಬಿಟ್ಟು, ಆಲಿಕೆ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಿ. ಹೆಚ್ಚು ಹೆಚ್ಚು ಕೇಳುತ್ತಾ ಹೋದಷ್ಟು ಕಲಿಯುತ್ತೀರಿ. ಆರೋಗ್ಯ ದೃಷ್ಟಿಯಿಂದ ಈ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಿ ಎಂದರು.

ವಾಣಿಜ್ಯ ಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಲೆಫ್ಟಿನೆಂಟ್ ಡಾ.ವಿರುಪಾಕ್ಷ. ಜೆ.ಡಿ ತಮ್ಮ ಪ್ರಾಸ್ತಾವಿಕ ಭಾಷಣದಲ್ಲಿ, ಇಂದಿನ ಯುವಜನತೆ ಸ್ಟಾರ ನಟ, ನಟಿ, ಸೇರಿದಂತೆ ಸೆಲೆಬ್ರಿಟಿಗಳನ್ನ ಅನುಸರಿಸುತ್ತಿದ್ದು, ಅವರನ್ನು ಅನುಸರಿಸುವ ಭರದಲ್ಲಿದೆ. ಆದರೆ, ಯಾವುದೇ ಸೆಲೆಬ್ರಿಟಿಗಳು ತಾವು ನೀಡುವ ಜಾಹೀರಾತು ಉತ್ಪನ್ನಗಳನ್ನು ಬಳಸುವುದಿಲ್ಲ. ಇದರ ಕುರಿತು ವಿದ್ಯಾರ್ಥಿಗಳಿಗೆ ಯೋಚಿಸಿ ನಿರ್ಧಾರ ಕೈಗೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಗ್ರಾಮೀಣ ಶಿಕ್ಷಣಾಭಿವೃದ್ಧಿ ಸಂಸ್ಥೆಯ ವತಿಯಿಂದ ರಕ್ತ ಹೀನತೆ ಕುರಿತು ಉಚಿತ ತಪಾಸಣೆ ಮತ್ತು ಔಷಧ ವಿತರಣೆ ನಡೆಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಚಂದ್ರಶೇಖರ್ ಮತ್ತು ವಿನೋದ, ಐಕ್ಯೂಎಸಿ ಸಂಯೋಜಕರಾದ ಡಾ. ಯೋಗೀಶ್, ದೈಹಿಕ ಶಿಕ್ಷಣ ವಿಭಾಗದ ಮುಖ್ಯಸ್ಥರಾದ ನಾಗರಾಜು.ಬಿ.ಎಸ್, ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಅಶ್ವಿನಿ.ಆರ್, ಇತಿಹಾಸ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಶಶಿಕುಮಾರ್.ಬಿ.ಎಸ್, ಸೇರಿದಂತೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . CONTACT : 9901010109 GMAIL: suryapragathi2021@gmail.com.